ಸಂಪುಟ : 10 ಸಂಚಿಕೆ: 55 ಪುಟ : 4+2 ಬೆಲೆ: 3.00 ಶನಿವಾರ ಮಾರ್ಚ್ 29 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್


# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 55 Pages : 4+2 Price : 3.00 Saturday March 29 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಪತ್ನಿಯನ್ನು ಕೊಂದ ಆರೋಪಿತನಿಗೆ ಜೀವಾವಧಿ ಶಿಕ್ಷೆ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪತ್ನಿಯ ಶೀಲ ಶಂಕಿಸಿ ಕೊಲೆ ಮಾಡಿದ ಆರೋಪಿ ವೀರಯ್ಯ ತಂದೆ ಶಿವಯ್ಯ ಹಿರೇಮಠ ಈತನಿಗೆ ಜಿಲ್ಲಾ ಸತ್ರ ನ್ಯಾಯಾಲಯವು ಜೀವಾವಧಿ ಶಿಕ್ಷೆಯನ್ನು ವಿಧಿಸಿ ಆದೇಶಿಸಿದೆ.

ಲಕ್ಷ್ಮೇಶ್ವರ ಪೊಲೀಸ್ ಠಾಣೆ ವ್ಯಾಪ್ತಿಯ ಹಿರೇಮಲ್ಲಾಪುರ ಗ್ರಾಮದ ವೀರಯ್ಯ ತಂದೆ ಶಿವಯ್ಯ ಹಿರೇಮಠ ಈತ 2004ರ ಡಿಸೆಂಬರ್ 8ರಂದು ಪತ್ನಿ ಈರಮ್ಮ ಹಿರೇಮಠ ಎಂಬುವವಳನ್ನು ಶೀಲ ಶಂಕಿಸಿ ಕೊಲೆ ಮಾಡಿದ ಪ್ರಕರಣಕ್ಕೆ ಸಂಬಂಧಿಸಿಸಿ ಬಂಧಿಸಲಾಗಿತ್ತು.

ಪ್ರಕರಣದ ಸಾಕ್ಷಿ ವಿಚಾರಣೆ ನಡೆಸಿದ ಪ್ರಧಾನ ಜಿಲ್ಲಾ ಸತ್ರ ನ್ಯಾಯಾದೀಶರಾದ ಬಸವರಾಜ ಅವರು ಪ್ರಕರಣ ರುಜುವಾತಾಗಿದ್ದರಿಂದ ವೀರಯ್ಯ ಹಿರೇಮಠನಿಗೆ ಮಾರ್ಚ್ 28ರಂದು ಜೀವಾವಧಿ ಶಿಕ್ಷೆ ಹಾಗೂ 10 ಸಾವಿರ ರೂ ದಂಡದ ಶಿಕ್ಷೆ ವಿಧಿಸಿ ತೀರ್ಪು ನೀಡಿದ್ದಾರೆ. ಪ್ರಕರಣದಲ್ಲಿ ಸರಕಾರದ ಪರವಾಗಿ ಗದಗ ಅಭಿಯೋಜಕರಾದ ಸವಿತಾ ಎಂ.ಶಿಗ್ಲಿ ವಾದ ಮಂಡಿಸಿದ್ದರು.

## ಗದಗ-ಬೆಟಗೇರಿ: ಇಂದಿನ ನೀರು ಪೂರೈಕೆ ವಿವರ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಮಾರ್ಚ್ 29ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ: ವಾರ್ಡ್ ನಂ. 33 - ಜಾಕೀರ್ ಹುಸೇನ್ ಕಾಲೋನಿ, ಕರಿಗೌಡ್ರ ಲೈನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 28 - ಪಂಚಾಕ್ಷರಿ ನಗರ 5ನೇ ಕ್ರಾಸ್. ವಾರ್ಡ್ ನಂ. 29 - ಸಾಯಿ ನಗರ, ದೇವರಾಜ್ ಹಾಸ್ಟೆಲ್, ಕಲಾಮಂದಿರ ರಸ್ತೆ, ಪತಂಜಲಿ ಯೋಗ ಮಂದಿರ, ಮಸೂತಿ ಉಳಿದ ಕೆಲವು ಭಾಗಗಳು.

ವಾರ್ಡ್ ನಂ. 22 - ಗಂಗಿಮಡಿ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 30, 34 - ವಡ್ಡರಗೇರಿ, ಕೊರವರ ಓಣಿ, ಮೂರು ಶಿಳ್ಳಿನ ವಕಾರ, ಡಿಪೋ ಹಿಂದಿನ ಭಾಗ, ಪಾಠಶಾಲೆ, 1ನೇ ಕ್ರಾಸ್, ಶಿವಾನಂದ ಗಾರ್ಡನ್ ಉಳಿದ ಕೆಲವು ಭಾಗಗಳು. ವಾರ್ಡ್ ನಂ. 6 - ಮಳಲಿ ಪೂಜಾರರವರ ಲೈನ್, ತಟ್ಟಿಯವರ ಲೈನ್ ನಾವಳ್ಳಿಯವರ ಲೈನ್, ಪಣಿಬಂದ್ ಅವರ ಲೈನ್ ಉಳಿದ ಕೆಲವು ಭಾಗಗಳು.

ಪ್ರಕಟಣೆ: ಗದಗ-ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ, ತುಂಗಭದ್ರಾ ನದಿಯಿಂದ ಸರಬರಾಜು ಆಗುತ್ತಿರುವ ನೀರನ್ನು ಕಾಯಿಸಿ ಆರಿಸಿ ಕುಡಿಯಲು ನಿರ್ದೇಶನ ನೀಡಲಾಗಿದೆ ಹಾಗೂ ತಮಗೆ ನೀರು ಸಾಕಾದಾಗ ತಮ್ಮ ತಮ್ಮ ನೀರಿನ ನಳಗಳನ್ನು ಬಂದ್ ಮಾಡುವ ಮೂಲಕ ನೀರು ಪೋಲಾಗದಂತೆ ತಡೆಯುವಲ್ಲಿ ಮುತುವರ್ಜಿ ವಹಿಸಬೇಕೆಂದು ಹಾಗೂ ತಮ್ಮ ನೀರಿನ ಕರ ಪಾವತಿಸುವಲ್ಲಿ ತಾವು ವಿಳಂಬ ಮಾಡದೇ ತಮ್ಮ ಬಾಕಿ ಇರುವ ನೀರಿನ ಕರವನ್ನು ನಗರಸಭೆಗೆ ಪಾವತಿಸಬೇಕೆಂದು ತಿಳಿಸಿದ್ದಾರೆ. ಒಂದು ವೇಳೆ ಈ ರೀತಿ ಮಾಡದೇ ಹೋದ ಸಂದರ್ಭದಲ್ಲಿ ತಮಗೆ ದಂಡ ವಿಧಿಸಿ ತಮ್ಮ ನೀರಿನ ನಳವನ್ನು ಬಂದ್ ಮಾಡಲಾಗುವುದು ಎಂದು ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಬಿಜೆಪಿಯಿಂದ ಬಸನಗೌಡ ಪಾಟೀಲ ಯತ್ನಾಳ್ ಉಚ್ಚಾಟನೆ ವಿರೋಧಿಸಿ ಪಂಚಮಸಾಲಿಗಳಿಂದ ಪ್ರತಿಭಟನೆ

# ಬಿಜೆಪಿ ತನ್ನ ನಿರ್ಧಾರವನ್ನು ಹಿಂಪಡೆಯಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ವಿಜಯಪುರ ನಗರ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಬಿಜೆಪಿ ಪಕ್ಷದಿಂದ ಉಚ್ಚಾಟನೆ ಮಾಡಿರುವುದನ್ನು ವಿರೋಧಿಸಿ ಪಂಚಮಸಾಲಿಗಳು ಶುಕ್ರವಾರ ನಗರದಲ್ಲಿ ಬಿಜೆಪಿಯ ವಿರುದ್ಧ ಪ್ರತಿಭಟನೆ ನಡೆಸಿ, ಮಾಜಿ ಸಿಎಂ ಬಿ.ಎಸ್. ಯಡಿಯೂರಪ್ಪ ಹಾಗೂ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ವಿರುದ್ಧ ಧಿಕ್ಕಾರ ಕೂಗಿ ತಮ್ಮ ಅಸಮಾಧಾನ ಹೊರಹಾಕಿದರು.

ಈ ವೇಳೆ ಮಾತನಾಡಿದ ಪಂಚಮಸಾಲಿ ಯುವ ಘಟಕದ ಜಿಲ್ಲಾಧ್ಯಕ್ಷ ಅಯ್ಯಪ್ಪ ಅಂಗಡಿ, ಬಿ.ಎಸ್. ಯಡಿಯೂರಪ್ಪ ಈ ಹಿಂದೆ ಪಕ್ಷದ ಹಲವಾರು ನಾಯಕರನ್ನು ತುಳಿದಿದ್ದಾರೆ. ಹಿಂದುತ್ವದ ಪರವಾಗಿ ಪ್ರಬಲವಾಗಿ ಧ್ವನಿ ಎತ್ತುವ ನಾಯಕರಲ್ಲಿ ಬಸನಗೌಡ ಪಾಟೀಲ್ ಯತ್ನಾಳ್ ಒಬ್ಬರಾಗಿದ್ದಾರೆ. ರಾಜ್ಯ ನಾಯಕರ ಕುತಂತ್ರದಿಂದ ಅವರನ್ನು ಉಚ್ಚಾಟನೆ ಮಾಡಲಾಗಿದೆ. ಬಿಜೆಪಿ ಈ ಕೂಡಲೇ ತನ್ನ ನಿರ್ಧಾರವನ್ನು ಹಿಂದಕ್ಕೆ ಪಡೆಯಬೇಕು. ಇಲ್ಲದಿದ್ದರೆ ಕರ್ನಾಟಕದಲ್ಲಿ ಬಿಜೆಪಿಗೆ ಭವಿಷ್ಯವಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.



ಪ್ರಬಲ ಹಿಂದುತ್ವವಾದಿಗಳಾದ ಮಾಜಿ ಸಚಿವ ಕೆ.ಎಸ್. ಈಶ್ವರಪ್ಪ, ಮಾಜಿ ಸಂಸದ ಪ್ರತಾಪ್ ಸಿಂಹ, ಅನಂತಕುಮಾರ್ ಹೆಗಡೆಯವರಂತಹ ನಾಯಕರನ್ನು ಯಡಿಯೂರಪ್ಪ ಮತ್ತು ಮಕ್ಕಳು ಮುಗಿಸುವ ಕೆಲಸ ಮಾಡಿದರು. ಈಗ ಬಸನಗೌಡ ಪಾಟೀಲ್ ಯತ್ನಾಳ್ ಅವರನ್ನು ಮುಗಿಸುವ ಕುತಂತ್ರಕ್ಕೆ ಕೈ ಹಾಕಿದ್ದಾರೆ. ಆದರೆ, ಮುಂದಿನ ದಿನಮಾನಗಳಲ್ಲಿ ಅಖಂಡ ಹಿಂದೂಗಳು ಹಾಗೂ ಪಂಚಮಸಾಲಿ ಸಮುದಾಯ ಭಾರತೀಯ ಜನತಾ ಪಕ್ಷದಿಂದ ದೂರ ಉಳಿಯುವ ಸಾಧ್ಯತೆಯಿದ್ದು, ಹೈಕಮಾಂಡ್ ಎಚ್ಚೆತ್ತುಕೊಳ್ಳಬೇಕಿದೆ. ಜೊತೆಗೆ, ಅಪ್ಪ-ಮಕ್ಕಳ ಕುತಂತ್ರವನ್ನು ಹೈಕಮಾಂಡ್ ಗಮನಿಸಬೇಕು ಎಂದರು.

ಬಸವರಾಜ ಗಡ್ಡೆಪ್ಪನವರ ಮಾತನಾಡಿ, ಬಸನಗೌಡ ಪಾಟೀಲ್ ಯತ್ನಾಳರನ್ನು ರಾಜಕೀಯದಿಂದ ಮುಗಿಸುವ ಹುನ್ನಾರ ನಡೆದಿದೆ. ಆದರೆ, ಇದು ಕೈಗೂಡುವುದಿಲ್ಲ. ಯತ್ನಾಳ್ ಅವರಿಗೆ ರಾಜ್ಯಾದ್ಯಂತ ತನ್ನದೇ ಆದ ಅಭಿಮಾನಿ ಬಳಗ ಇದೆ. ಅವರು ಪಂಚಮಸಾಲಿ ಸಮುದಾಯದ ದೊಡ್ಡ ನಾಯಕರಲ್ಲಿ ಒಬ್ಬರು. ಅವರ ವಿರುದ್ಧ ದೊಡ್ಡ ಷಡ್ಯಂತ್ರ ನಡೆದಿದ್ದು, ಅದ್ಯಾವುದಕ್ಕೂ ಅವರು ಜಗ್ಗುವವರಲ್ಲ. ಹೈಕಮಾಂಡ್‌ನ ಇಂತಹ ಕಠಿಣ ನಿರ್ಧಾರದಿಂದಾಗಿ ಕರ್ನಾಟಕದಲ್ಲಿ ಭಾರತೀಯ ಜನತಾ ಪಕ್ಷ 66 ಸ್ಥಾನದಿಂದ 30 ಸ್ಥಾನಕ್ಕೆ ಇಳಿಯುವುದು ನಿಶ್ಚಿತ ಎಂದು ಭವಿಷ್ಯ ನುಡಿದರು.

ಪ್ರತಿಭಟನೆಯಲ್ಲಿ ಸಂಗಮೇಶ ಅಂಗಡಿ, ಬಸವರಾಜ ಮನಗುಂಡಿ, ಬಸವರಾಜ ಅನಗವಾಡಿ, ನಾಗರಾಜ ಗುರಿಕಾರ, ಮಂಜುನಾಥ ಗುಡದೂರ, ಈರಮ್ಮ ತಾಳಿಕೋಟಿ, ಪ್ರಶಾಂತ ಚವಡಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.




### ಪ್ರತಿಕೃತಿ ದಹನ ಯತ್ನ ವಿಫಲ

ಪ್ರತಿಭಟನೆಯ ವೇಳೆ ಆಕ್ರೋಶಗೊಂಡ ಪಂಚಮಸಾಲಿ ಸಮುದಾಯದ ಮುಖಂಡರು ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರ ಪ್ರತಿಕೃತಿ ದಹಿಸಲು ಮುಂದಾದರು. ಇದನ್ನು ಗಮನಿಸಿದ ಪೊಲೀಸರು ಕೂಡಲೇ ಅದನ್ನು ತಡೆದರು. ಈ ವೇಳೆ ಕೆಲ ಹೊತ್ತು ಪ್ರತಿಭಟನಕಾರರು ಹಾಗೂ ಪೊಲೀಸರ ನಡುವೆ ಮಾತಿನ ಚಕಮಕಿ ನಡೆಯಿತು.

### 'ಕಾನೂನು ಅರಿವು' ಕಾರ್ಯಕ್ರಮ ಉದ್ಘಾಟಿಸಿದ ನ್ಯಾ. ಸಿ.ಎಸ್. ಶಿವನಗೌಡ್ರ

# ನಮ್ಮ ಸಂವಿಧಾನದಡಿ ಎಲ್ಲರೂ ಸಮಾನರು

■ ವಿಜಯಸಾಕ್ಷಿ ಸುದ್ದಿ, ಗದಗ

ನಮ್ಮ ಸಂವಿಧಾನದಡಿ ಎಲ್ಲರೂ ಸಮಾನರು. ಹಿಂದುಳಿದವರು, ಸಮಾಜದ ಮುಖ್ಯವಾಹಿನಿಗೆ ಬರಲೆಂದು ಮೀಸಲಾತಿಯಂತಹ ಸೌಲಭ್ಯಗಳನ್ನು ತರಲಾಗಿದೆ. ಯಾವುದೇ ವ್ಯಕ್ತಿಯನ್ನು ಜಾತಿ, ಲಿಂಗ ಆಧಾರದ ಮೇಲೆ ತಾರತಮ್ಯ ಮಾಡುವಂತಿಲ್ಲ ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ, ಹಿರಿಯ ದಿವಾಣಿ ನ್ಯಾಯಾಧೀಶರಾದ ಸಿ.ಎಸ್. ಶಿವನಗೌಡ್ರ ನುಡಿದರು.

ಅವರು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ವಕೀಲರ ಸಂಘ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಡಾ. ಪುಟ್ಟರಾಜ ಗವಾಯಿಗಳವರ ಅಂ-ಧರ ಶಿಕ್ಷಣ ಸಮಿತಿ, ಪಂ. ಪಂಚಾಕ್ಷರ ಗವಾಯಿಗಳವರ ಶಿಕ್ಷಣ ಮಹಾವಿದ್ಯಾಲಯ ಗದಗ ಇವರ ಸಂಯುಕ್ತಾಶ್ರಯದಲ್ಲಿ ನಗರದ ಹಾತಲಗೇರಿ ರಸ್ತೆಯಲ್ಲಿರುವ ಪಂ.ಪಂಚಾಕ್ಷರ ಗವಾಯಿಗಳವರ ಶಿಕ್ಷಣ ಮಹಾವಿದ್ಯಾಲಯದಲ್ಲಿ ಹಮ್ಮಿಕೊಳ್ಳಲಾಗಿದ್ದ ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರದ ಯೋಜನೆಗಳ ಕುರಿತ ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಸ್ವಾತಂತ್ರ್ಯಾನಂತರ ನಮಗೆ ಯಾವ ರೀತಿ ಹಕ್ಕು, ಕರ್ತವ್ಯ, ಸ್ವಾತಂತ್ರ್ಯವಿರಬೇಕು ಎಂಬುದಕ್ಕೆ ಭಾರತದಲ್ಲಿ ಸಂವಿಧಾನವನ್ನು ಜಾರಿಗೆ ತರಲಾಯಿತು ಎಂದು ತಿಳಿಸಿದ ಅವರು, ವಿವಿಧ ಕಾಯ್ದೆಗಳ ಕುರಿತು ಮಾಹಿತಿ ನೀಡಿದರು.




ಮುಖ್ಯ ಅತಿಥಿಗಳಾಗಿ ಪಾಲ್ಗೊಂಡಿದ್ದ ಜಿಲ್ಲಾ ವಕೀಲರ ಸಂಘದ ಅಧ್ಯಕ್ಷ ಎಂ.ಐ. ಹಿರೇಮನಿಪಾಟೀಲ ಮಾತನಾಡಿ, ನಮ್ಮ ಸಮಾಜದಲ್ಲಿ ಶಿಕ್ಷಕರಿಗೆ ದೇವರ ಸ್ಥಾನ ಕೊಟ್ಟಿದೆ. ಅಂತಹ ಸ್ಥಾನವನ್ನು ಅಲಂಕರಿಸಲಿರುವ ಮಹಾವಿದ್ಯಾಲಯದ ವಿದ್ಯಾರ್ಥಿಗಳಿಗೆ ನಮ್ಮ ದೇಶದಲ್ಲಿರುವ ಕಾನೂನುಗಳ ಬಗ್ಗೆ ಅರಿವು ಇರಬೇಕು ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ನಿರೂಪಣಾಧಿಕಾರಿಗಳಾದ ರಾಧಾ ಜಿ.ಮಣ್ಣೂರ ಮಾತನಾಡಿ, ಮೂಲಭೂತ ದಾಖಲೆಗಳ ಕೊರತೆಯಿಂದಾಗಿ ಸರ್ಕಾರ ಇಲಾಖೆ ಮೂಲಕ ಜಾರಿಗೆ ತಂದ ಅನೇಕ ಯೋಜನೆಗಳು ಫಲಾನುಭವಿಗಳಿಗೆ ತಲುಪುವುದಿಲ್ಲ. ಹೀಗಾಗಿ ತಮ್ಮತಮ್ಮ ದಾಖಲೆಗಳನ್ನು ಸರಿಯಾಗಿಟ್ಟುಕೊಳ್ಳಬೇಕು ಎಂದು ತಿಳಿಸಿದ ಅವರು, ತಮ್ಮಇಲಾಖೆಯ ವಿವಿಧ ಯೋಜನೆಗಳ ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಪ್ರಾಚಾಯ ಡಾ. ವೀರೇಶ ಹಿತ್ತಲಮನಿ ವಹಿಸಿದ್ದರು. ಕಾರ್ಯಕ್ರಮದಲ್ಲಿ ಮಹಾವಿದ್ಯಾಲಯದ ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್. ಬುರಡಿ ಮಾತನಾಡಿ, ಮಕ್ಕಳು ಯಾವುದೇ ಒತ್ತಡವಿಲ್ಲದೇ ಸಂತಸದಿಂದ ಕಲಿಕೆಯಲ್ಲಿ ತೊಡಗಬೇಕು. ಹೊಸ ಹೊಸ ಯೋಚನೆಗಳ ಮೂಲಕ ಮಕ್ಕಳಿಗೆ ಶಿಕ್ಷಣ ನೀಡಬೇಕು. ಇಂದಿನ ಸವಾಲಿನ ಜೀವನದಲ್ಲಿ ಮಕ್ಕಳಲ್ಲಿ ಜ್ಞಾನ, ಶಿಕ್ಷಣ, ಕೌಶಲ್ಯಗಳನ್ನು ಬೆಳೆಸಬೇಕು. ನಮ್ಮ ಸಂವಿಧಾನ, ಕಾನೂನುಗಳ ಬಗ್ಗೆ ಎಲ್ಲರೂ ಅರಿವು ಹೊಂದಬೇಕು ಎಂದರು.

## ಜಿಲ್ಲಾಡಳಿತ ಭವನದಲ್ಲಿ ಅಗ್ನಿ ಬನ್ನಿರಾಯ ಸ್ವಾಮಿ ಜಯಂತಿ ಆಚರಣೆ



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾಡಳಿತ ಭವನದಲ್ಲಿ ಶುಕ್ರವಾರ ಅಗ್ನಿ ಬನ್ನಿರಾಯ ಸ್ವಾಮಿ ಜಯಂತಿ ಆಚರಿಸಲಾಯಿತು.

ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕ್ಬರಸಾಬ್ ಬಬರ್ಚಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ಶ್ರೀ ಅಗ್ನಿ ಬನ್ನಿರಾಯ ಸ್ವಾಮಿ ಅವರ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸುವದರ ಮೂಲಕ ಗೌರವ ಸಮರ್ಪಿಸಿದರು.


ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಅನ್ನಪೂರ್ಣ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯಸ್ವಾಮಿ ಹಿರೇಮಠ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಹೀಟ್ ವೇವ್ (ಶಾಖದ ಹೊಡೆತ)ದಿಂದ ಸಂರಕ್ಷಿಸಿಕೊಳ್ಳಲು ಮುಂಜಾಗ್ರತಾ ಕ್ರಮಗಳು

# ಬಿಸಿಲ ಬೇಗೆಯ ಎಚ್ಚರವಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಪ್ರಸ್ತುತ ಹಾಗೂ ಮುಂಬರುವ ಬೇಸಿಗೆ ದಿನಗಳಲ್ಲಿ ಸೂರ್ಯನ ಶಾಖ ದಿನದಿಂದ ದಿನಕ್ಕೆ ಹೆಚ್ಚಾಗುವ ಹಿನ್ನೆಲೆಯಲ್ಲಿ ಹೀಟ್‌ವೇವ್ (ಶಾಖದ ಹೊಡೆತ) ಸ್ಟ್ರೋಕ್‌ನಿಂದಾಗಿ ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆಯಿರುವುದರಿಂದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರವು ಮುಂಜಾಗ್ರತಾ ಕ್ರಮವಾಗಿ ಸಾರ್ವಜನಿಕರು ತಮ್ಮ ಆರೋಗ್ಯ ಕಾಪಾಡಿಕೊಳ್ಳಲು ಸಲಹೆಗಳನ್ನು ನೀಡಿದೆ.



ಸಾರ್ವಜನಿಕರು ಬಿಸಿಲು ದಿನಗಳಲ್ಲಿ ಛತ್ರಿ ಬಳಸಿ ಹಾಗೂ ಸಾಧ್ಯವಾದಷ್ಟು ತಂಪಾದ ಸ್ಥಳಗಳಲ್ಲಿ ಉಳಿಯಲು ಪ್ರಯತ್ನಿಸಬೇಕು. ತೆಳುವಾದ ಸಡಿಲವಾದ ಹತ್ತಿಯ ಉಡುಪುಗಳನ್ನು ಧರಿಸಿ, ಆದಷ್ಟು ಬಿಳಿ ಬಣ್ಣದ ಬಟ್ಟೆಗಳ ಬಳಕೆ ಒಳ್ಳೆಯದು. ಹತ್ತಿಯ ಅಥವಾ ಟರ್ಬನ್ ಟೋಪಿ ಹಾಗೂ ಕೂಲಿಂಗ್ ಗ್ಲಾಸ್ ಧರಿಸಿರಿ. ಹಿರಿಯ ನಾಗರಿಕರಿಗೆ, ಮಕ್ಕಳಿಗೆ ಹೆಚ್ಚು ನೀರು ಕುಡಿಯಲು ಕೊಡಬೇಕು. ಬೆಳಿಗ್ಗೆ 12ರಿಂದ ಸಂಜೆ 3ರವರೆಗೆ ಹೊರಾಂಗಣ ದೈಹಿಕ ಚಟುವಟಿಕೆಗಳನ್ನು ಕಡಿಮೆ ಮಾಡಲು ಪ್ರಯತ್ನಿಸಿ. ಸಾಕಷ್ಟು ನೀರು ಕುಡಿಯಿರಿ. ಮಜ್ಜಿಗೆ ಮತ್ತು ಗ್ಲೂಕೋಸ್/ಓಆರ್‌ಎಸ್ ಎಳೆನೀರಿನಂತಹ ದ್ರವ ಪದಾರ್ಥಗಳನ್ನು ಹೆಚ್ಚು ಉಪಯೋಗಿಸಿ. ಕೊಠಡಿಯ ತಾಪಮಾನವನ್ನು ಕಡಿಮೆ ಮಾಡಲು ಸೂಕ್ತ ಕ್ರಮಗಳನ್ನು ತೆಗೆದುಕೊಳ್ಳಬೇಕು. ಹೀಟ್ ಸ್ಟ್ರೋಕ್ ಲಕ್ಷಣಗಳನ್ನು ಹೊಂದಿರುವ ವ್ಯಕ್ತಿಯನ್ನು ತಂಪಾದ ಜಾಗಕ್ಕೆ ಸ್ಥಳಾಂತರಿಸಬೇಕು. ಶಾಖದ ಹೊಡೆತದಿಂದ ಬಳಲುತ್ತಿರುವ ವ್ಯಕ್ತಿಯು ಕನಿಷ್ಠ ಬಟ್ಟೆಯನ್ನು ಹೊಂದಿರುವಂತೆ ನೋಡಿ-ಕೊಂಡು, ವ್ಯಕ್ತಿಗೆ ತಣ್ಣೀರಿನಿಂದ ಸ್ಪಾಂಜ್ ಮಾಡಬೇಕು ಅಥವಾ ಐಸ್‌ಪ್ಯಾಕ್‌ಗಳನ್ನು ಉಪಯೋಗಿಸಬಹುದು. ಹೀಟ್‌ವೇವ್ ಸ್ಟ್ರೋಕ್‌ಗೆ ಒಳಗಾದ ವ್ಯಕ್ತಿಗೆ ಯಾವುದೇ ಸುಧಾರಣೆ ಕಂಡು ಬರದಿದ್ದರೆ, ಅವರನ್ನು ಕೂಲಿಂಗ್ ವ್ಯವಸ್ಥೆಯೊಂದಿಗೆ ತಕ್ಷಣ ಆಸ್ಪತ್ರೆಗೆ ಸ್ಥಳಾಂತರಿಸಬೇಕು.

ಕಾಫಿ/ ಟೀ, ಹೆಚ್ಚು ಸಕ್ಕರೆ ಅಂಶವನ್ನು ಹೊಂದಿರುವ ಕಾರ್ಬೋನೇಟೆಡ್ ಪಾನೀಯ ಹಾಗೂ ಮದ್ಯಪಾನದಿಂದ ದೂರವಿರಿ. ಬಿಸಿ ಗಾಳಿ ಹಾಗೂ ಅತಿಯಾದ ತಾಪಮಾನದಿಂದ ಆರೋಗ್ಯ ಸಮಸ್ಯೆ ಉಂಟಾದಲ್ಲಿ ಸಮೀಪದ ಆರೋಗ್ಯ ಕೇಂದ್ರವನ್ನು ಸಂಪರ್ಕಿಸಿ ಅಥವಾ-108/102 ಸಂಖ್ಯೆಗೆ ಕರೆ ಮಾಡಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬೇಸಿಗೆಯಲ್ಲಿ ಹೊರಗಿನಿಂದ ಬಂದ ತಕ್ಷಣ ನೀರು/ಓಆರ್‌ಎಸ್/ಮಜ್ಜಿಗೆಯಂತಹ ಪಾನೀಯ ಬಳಸಬಹುದು. 5 ವರ್ಷದ ಒಳಗಿನ ಮಕ್ಕಳಿಗೆ ಪ್ರತಿ ಅರ್ಧ ಗಂಟೆಗೊಮ್ಮೆ ಒಂದು ಚಿಟಿಕೆಯಷ್ಟು ಅಯೋಡಿಯನ್ ಉಪ್ಪು ಬೆರೆಸಿದ ನೀರನ್ನು ಕುಡಿಸುತ್ತಿರಬೇಕು. ಬೇಸಿಗೆ ದಿನಗಳಲ್ಲಿ ತಣ್ಣೀರಿನ ಸ್ನಾನ ಒಳ್ಳೆಯದು. ಆಹಾರದಲ್ಲಿ ಮಸಾಲ ಪದಾರ್ಥಗಳನ್ನು ಹೆಚ್ಚು ಬಳಸಬಾರದು. ಕಪ್ಪು, ನೀಲಿ ಬಣ್ಣದ ಬಟ್ಟೆ ಧರಿಸಬಾರದು. ಹೆಚ್ಚು ಕಾಟನ್ ಬಟ್ಟೆ ಧರಿಸಬೇಕು. ನೀರಿನ ಅಂಶ ಹೆಚ್ಚಾಗಿರುವ ತರಕಾರಿ/ಹಣ್ಣುಗಳನ್ನು ಸೇವಿಸುವುದು ಉತ್ತಮ.

## ಸಾಕ್ಷಿ ಸುಭಾಷಿತ

ಈ ಜಗತ್ತಿನಲ್ಲಿ ಭೂಮಿಯನ್ನು ತಿರುಗಿಸುವ ಒಂದು ವಿಶೇಷ ಶಕ್ತಿಯಿದೆ, ಗಿಡ ಮರಗಳನ್ನು ಬೆಳೆಸುವ ಶಕ್ತಿಯಿದೆ ಎಂದಾದರೆ ಅಂತಹದೇ ಒಂದು ಶಕ್ತಿ ಮನುಷ್ಯನಲ್ಲೂ ಇರುತ್ತದೆ. ಆ ಶಕ್ತಿಯ ಬಗ್ಗೆ ನಂಬಿಕೆ ಇಡಬೇಕು ಮತ್ತು ಅದನ್ನು ಬಳಸುವ ಧೈರ್ಯ ಮಾಡಬೇಕು. ಸಾವಿಗಿಂತಲೂ ದೊಡ್ಡದಾದ್ದು ಏನಾದರು ಇದೆ ಎಂದರೆ ಅದು ಜೀವನ. ಆ ಜೀವನಕ್ಕಾಗಿ ಹೋರಾಡಬೇಕು.

– ಚಾರ್ಲಿ ಚಾಪ್ಲಿನ್.

## ಸಂಪಾದಕೀಯ

# ಭಾರತ ಬಡವರಿಗೇ ಸೀಮಿತ

ದೇಶದ ಸಿರಿವಂತರು ಭಾರತವನ್ನು ಬಿಟ್ಟು ವಿದೇಶದಲ್ಲಿ ನೆಲೆ ಕಂಡುಕೊಳ್ಳುತ್ತಿದ್ದಾರೆ. ಕೋಟಕ್ ಬ್ಯಾಂಕಿನ ವಿಭಾಗವೊಂದು ನಡೆಸಿದ ಸಮೀಕ್ಷೆಯಲ್ಲಿ ಈ ಅಂಶ ಮತ್ತೊಮ್ಮೆ ಸ್ಪಷ್ಟವಾಗಿದೆ. ಇಷ್ಟು ದಿನ ದೇಶದಲ್ಲಿ ಹಣಕಾಸಿನ ವಂಚನೆ ನಡೆಸಿ ವಿದೇಶದಲ್ಲಿ ತಲೆ ಮರೆಸಿಕೊಳ್ಳುತ್ತಿದ್ದರು. ಈಗ ರಾಜಾರೋಷವಾಗಿ ಹಣ ಗಳಿಕೆ ಮಾಡಿ ವಿದೇಶಕ್ಕೆ ಹಾರುತ್ತಿದ್ದಾರೆ.

ಕೋಟಕ್ ಬ್ಯಾಂಕ್ ನಡೆಸಿದ ಸಮೀಕ್ಷೆಯಲ್ಲಿ, ಭಾರತದಲ್ಲಿ 25 ಕೋಟಿ ರೂಪಾಯಿ ನಿವ್ವಳ ಮೌಲ್ಯ ಹೊಂದಿರುವ ಉದ್ಯಮಿದಾರರು, ಸಿರಿವಂತರು ಭಾರತವನ್ನ ತೊರೆಯುತ್ತಿರುವವರಲ್ಲಿ ಪ್ರಮುಖರಾಗಿದ್ದಾರೆ.

ಸಿರಿವಂತರ ಈ ವಲಸೆಗೆ ವಿದೇಶದಲ್ಲಿನ ಉತ್ತಮ ಜೀವನಮಟ್ಟ ಪ್ರಮುಖವಾಗಿದೆ. ಜೊತೆಗೆ ವ್ಯಾಪಾರಕ್ಕೆ ಅನುಕೂಲಕರ ವಾತಾವರಣ, ಶಿಕ್ಷಣ ಮತ್ತು ಗುಣಮಟ್ಟದ ಆರೋಗ್ಯ ಸೇವೆ ದೇಶ ತೊರೆಯಲು ಕಾರಣವಾಗಿದೆ.

ಸದ್ಯದ ಭಾರತದ ಪರಿಸ್ಥಿತಿ ನೋಡಿದರೆ, ಉತ್ತಮ ಜೀವನಮಟ್ಟ ಶಿಕ್ಷಣ, ವ್ಯಾಪಾರ, ಆರೋಗ್ಯ ಸೇವೆ ಮರೀಚಿಕೆಯಾಗಿದೆ. ಹೀಗಾಗಿ ದೇಶದ ಅನೇಕ ಸಿರಿವಂತರು ಈಗ ಭಾರತವನ್ನು ಬಿಟ್ಟು ವಿದೇಶದಲ್ಲಿ ನೆಲೆ ಕಂಡುಕೊಳ್ಳುತ್ತಿದ್ದಾರೆ.

ಈ ಸಿರಿವಂತರ ವಲಸೆ ಭಾರತದ ಆರ್ಥಿಕತೆ ಮೇಲೆ ಪರಿಣಾಮ ಬೀರುವುದಲ್ಲದೆ, ಸಾಮಾಜಿಕ ಪರಿಸ್ಥಿತಿಯ ಮೇಲು ಪರಿಣಾಮ ಉಂಟುಮಾಡಲಿದೆ. ಈಗಾಗಲೇ ಉದ್ಯೋಗ ಅರಸಿ ವಿದೇಶಕ್ಕೆ ಹೋಗಿರುವಂತಹ ಪ್ರತಿಭಾವಂತರು ಅಲ್ಲೇ ತಮ್ಮ ನೆಲೆಯನ್ನ ಕೊಂಡುಕೊಳ್ಳುತ್ತಿದ್ದಾರೆ. ಈಗ ದೇಶದ ಸಿರಿವಂತರೂ ಸಹ ವಿದೇಶದತ್ತಲೇ ಮುಖ ಮಾಡುವಂತಾದರೆ ಭಾರತ ಕೇವಲ ಬಡವರಿಗೆ ಸೀಮಿತವಾದ ದೇಶವಾಗಲಿದೆ.

**ವಾಣಿಜ್ಯಶಾಸ್ತ್ರ ಉಪನ್ಯಾಸಕ ಸತ್ತಾರ ಬಡೇಖಾನ ಅವರ ಸೇವಾ ನಿವೃತ್ತಿ, ಸನ್ಮಾನ ಕಾರ್ಯಕ್ರಮ ಇಂದು**

# ಸಾವಿರಾರು ವಿದ್ಯಾರ್ಥಿಗಳ ಭವಿಷ್ಯದ ರೂವಾರಿ

■ ವಿಜಯಸಾಕ್ಷಿ ಸುದ್ದಿ, ಗದಗ

35 ವರ್ಷಗಳ ಕಾಲ ತಮ್ಮ ಪ್ರಾಮಾಣಿಕ ಬೋಧನಾ ಕೌಶಲ್ಯದ ಮೂಲಕ ಸಾವಿರಾರು ಪ್ರತಿಭಾವಂತ ವಿದ್ಯಾರ್ಥಿಗಳ ಭವಿಷ್ಯ ರೂಪಿಸಿದ ಸರ್ಕಾರಿ ಪ್ರಥಮದರ್ಜೆ ಮಹಿಳಾ ಕಾಲೇಜಿನ ವಾಣಿಜ್ಯಶಾಸ್ತ್ರ ಉಪನ್ಯಾಸಕರಾಗಿ ಅನುಪಮ ಸೇವೆ ಸಲ್ಲಿಸಿದ ಸತ್ತಾರ ಎಚ್.ಬಡೇಖಾನವರ ಮಾರ್ಚ್ 29ರಂದು ನಿವೃತ್ತಿ ಹೊಂದಲಿದ್ದು, ಇವರಿಗೆ ಸರ್ಕಾರಿ ಪ್ರಥಮ ದರ್ಜೆ ಮಹಿಳಾ ಕಾಲೇಜಿನಿಂದ ಸನ್ಮಾನ ಜರುಗಲಿದೆ.

ಹುಸೇನಸಾಬ-ಮಹಬೂಬಿ ಅವರು ಪ್ರೊ. ಸತ್ತಾರ ಬಡೇಖಾನರ ತಂದೆ-ತಾಯಿಗಳು. ಗದಗ ನಗರದಲ್ಲಿ ಸರಕಾರಿ ಪ್ರಾಥಮಿಕ, ಮುನ್ಸಿಪಲ್ ಹೈಸ್ಕೂಲ್‌ನಲ್ಲಿ ಪ್ರೌಢ ಶಿಕ್ಷಣ, ಎಚ್‌ಸಿಇಎಸ್ ಕಾಲೇಜಿನಲ್ಲಿ ಪಿಯುಸಿ,

> ವಾಣಿಜ್ಯ ಕ್ಷೇತ್ರ ವಿವಿಧ ಆಯಾಮಗಳನ್ನು ಪಡೆಯುತ್ತಿರುವುದರಿಂದ ಉದ್ಯೋಗ ಅವಕಾಶಗಳನ್ನು ಪಡೆಯಲು ವಿದ್ಯಾರ್ಥಿಗಳು ನಿರಂತರ ಕಲಿಕೆಯನ್ನು ಅಳವಡಿಸಿಕೊಳ್ಳಬೇಕು. ಶಿಕ್ಷಕರು ಸಹ ಹೊಸ ಹೊಸ ವಿಷಯಗಳನ್ನು ವಿದ್ಯಾರ್ಥಿಗಳಿಗೆ ಮನವರಿಕೆ ಮಾಡಿಕೊಡಬೇಕು.
> – ಪ್ರೊ. ಸತ್ತಾರ ಬಡೇಖಾನ.
> ಸ.ಪ್ರ.ದ ಮಹಿಳಾ ಕಾಲೇಜು, ಗದಗ.



ಎ.ಎಸ್.ಎಸ್ ಕಾಲೇಜಿನಲ್ಲಿ ಬಿ.ಕಾಂ, ಕೊಲ್ಲಾಪುರದ ಶಿವಾಜಿ ವಿಶ್ವವಿದ್ಯಾಲಯದಲ್ಲಿ ಎಂ.ಕಾಂ, ಸ್ನಾತಕೋತ್ತರ ಪದವಿ ಮತ್ತು ಎಂಫಿಲ್ ಪಡೆದರು.

ಕರ್ನಾಟಕ ಲೋಕಸೇವಾ ಆಯೋಗ ಆಹ್ವಾನಿಸಿದ್ದ ಸರ್ಕಾರಿ ಪದವಿ ಕಾಲೇಜುಗಳ ಸಹಾಯಕ ಪ್ರಾಧ್ಯಾಪಕರಾಗಿ 2009ರಲ್ಲಿ ಗದಗ ಜಿಲ್ಲೆಯ ಶಿರಹಟ್ಟಿ ಸ.ಪ್ರ.ದ ಕಾಲೇಜಿನಲ್ಲಿ ವಾಣಿಜ್ಯಶಾಸ್ತ್ರ ವಿಷಯದ ಸಹಾಯಕ ಪ್ರಾಧ್ಯಾಪಕರಾಗಿ ವೃತ್ತಿಯನ್ನು ಆರಂಭಿಸಿ 3 ವರ್ಷಗಳ ಸೇವೆಯ ನಂತರ 2015ರಲ್ಲಿ ಸ.ಪ್ರ.ದ ಮಹಿಳಾ ಕಾಲೇಜಿನಲ್ಲಿ 9 ವರ್ಷ ಸೇವೆ ಸಲ್ಲಿಸಿದ್ದಾರೆ. ಇದಕ್ಕೂ ಮೊದಲು ಬೇಟಗೇರಿಯ ವಿದ್ಯಾಭಾರತಿ ಪ.ಪೂ ಮಹಾವಿದ್ಯಾಲಯದಲ್ಲಿ 2 ವರ್ಷ, 1992ರಿಂದ 2006ರವರೆಗೆ ಗದಗಿನ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯಲ್ಲಿ 15 ವರ್ಷ, 2006ರಿಂದ 2009ರವರೆಗೆ ಬೆಂಗಳೂರಿನ ಜೈನ್ ಕಾಲೇಜಿನಲ್ಲಿ 3 ವರ್ಷಗಳ ಕಾಲ ಹೀಗೆ ಒಟ್ಟೂ 35 ವರ್ಷಗಳ ಕಾಲ ನಿರಂತರವಾಗಿ ವಿದ್ಯಾರ್ಥಿಗಳ ಬದುಕನ್ನು ಕಟ್ಟಿದ ಶ್ರೇಯಸ್ಸು ಇವರದಾಗಿದೆ.

ಐಕ್ಯೂಎಸ್ ಸಂಯೋಜಕರಾಗಿ ಪದವಿ ವಿದ್ಯಾರ್ಥಿಗಳ ಹಿತ್ತಕ್ಕಾಗಿ ಉತ್ತಮ ಕಲಿಕಾ ವಾತಾವರಣ, ಗುಣಮಟ್ಟದ ಗ್ರಂಥಾಲಯ, ಉತ್ತಮ ಬೋಧನೆ, ಸಿಬ್ಬಂದಿ ವರ್ಗದ ಕಾರ್ಯಕ್ಷಮತೆಗೆ ಯುಜಿಸಿ ನ್ಯಾಕ್ ಪೀರ್ ಸಮಿತಿ ಬಿ ಮಾನ್ಯತೆ ಪಡೆಯುವಂತೆ ಮಾಡಿದ ಶ್ರೇಯಸ್ಸು ಇವರದಾಗಿದೆ.

> ಪ್ರೊ. ಸತ್ತಾರ ಬಡೇಖಾನರು ಸಾವಿರಾರು ವಿದ್ಯಾರ್ಥಿಗಳ ಭವಿಷ್ಯ ಕಟ್ಟಲು ಪ್ರಾಮಾಣಿಕವಾಗಿ ತಮ್ಮನ್ನು ನಿರಂತರವಾಗಿ ತೊಡಗಿಸಿಕೊಳ್ಳುವುದರ ಮೂಲಕ ವಿದ್ಯಾರ್ಥಿಗಳ ಪ್ರೀತಿಯ ಪ್ರಾಧ್ಯಾಪಕರಾಗಿ ನಿವೃತ್ತಿ ಅಂಚಿನವರೆಗೂ ಅನುಪಮ ಸೇವೆ ಸಲ್ಲಿಸಿದ ಶ್ರೇಯಸ್ಸು ಹೊಂದಿದ್ದಾರೆ.
> – ಪ್ರೊ. ಎಮ್.ಯು. ಹಿರೇಮಠ.
> ಪ್ರಾಂಶುಪಾಲರು, ಸ.ಪ್ರ.ದ ಮಹಿಳಾ ಕಾಲೇಜು, ಗದಗ.

ಸದಾ ತಮ್ಮನ್ನು ಶೈಕ್ಷಣಿಕ ಚಟುವಟಿಕೆಯಲ್ಲಿ ತೊಡಗಿಸಿಕೊಂಡು ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ನಿರಂತರವಾಗಿ ಶ್ರಮಿಸಿದರ ಫಲವಾಗಿ ಸಾವಿರಾರು ವಿದ್ಯಾರ್ಥಿಗಳು ಉನ್ನತ ಭವಿಷ್ಯ ಮತ್ತು ಉನ್ನತ ಉದ್ಯೋಗಗಳನ್ನು ಪಡೆಯುವಂತೆ ಮಾಡಿರುವ ಶ್ರೇಯಸ್ಸು ಹೊಂದಿದ್ದಾರೆ.

ಮಾರ್ಚ್ 29ರಂದು ಬೆಳಗ್ಗೆ 10.30ಕ್ಕೆ ಸ.ಪ್ರ.ದ ಮಹಿಳಾ ಕಾಲೇಜಿನಲ್ಲಿ ನಿವೃತ್ತರಾಗಲಿರುವ ಪ್ರೊ.ಸತ್ತಾರ ಬಡೇಖಾನ ಅವರನ್ನು ಸನ್ಮಾನಿಸಲಾಗುತ್ತಿದ್ದು, ಕಾರ್ಯಕ್ರಮದಲ್ಲಿ ವಿವಿಧ ಗಣ್ಯರು ಪಾಲ್ಗೊಳ್ಳಲಿದ್ದಾರೆ.

# ಶ್ರೀ ಸಚ್ಚಿದಾನಂದ ಮಹಾಸ್ವಾಮಿಗಳ ಮಠದ ಜಾತ್ರಾ ಮಹೋತ್ಸವ ಇಂದಿನಿಂದ

■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಹುಡ್ಕೋ ಬಡಾವಣೆಯಲ್ಲಿರುವ ಪರಮಹಂಸ ಪರಿವಾಜಕಾರ್ಯ ಶ್ರೀ 108 ಜಗದ್ಗುರು ಸಚ್ಚಿದಾನಂದ ಮಹಾಸ್ವಾಮಿಗಳ ಮಠದ ಜಾತ್ರಾ ಮಹೋತ್ಸವವು ಮಾರ್ಚ್ 29ರಿಂದ ಆರಂಭವಾಗಲಿದೆ ಎಂದು ಕಾರ್ಯದರ್ಶಿ ರವಿಕುಮಾರ ರಡ್ಡಿ ಮಾಹಿತಿ ನೀಡಿದರು.

ಈ ಬಗ್ಗೆ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಮಾ.29ರಂದು ಪ್ರಣವ ಧ್ವಜಾರೋಹಣ, ಮಧ್ಯಾಹ್ನ 1 ಗಂಟೆಗೆ ಭಕ್ತಾಧಿಗಳಿಗೆ ಪ್ರಸಾದ ವಿನಿಯೋಗ, ಮಾ. 31ರ ಬ್ರಾಹ್ಮಿ ಮೂಹೂರ್ತದಲ್ಲಿ ಸಪ್ತಾಹ ಪ್ರಾರಂಭ, ಪ್ರತಿದಿನ ಬೆಳಗಿನ ಜಾವದಲ್ಲಿ ಶ್ರೀ ಕರ್ತೃಗದ್ದುಗೆಯ ಪೂಜೆ, ಮಹಾಯಜ್ಞ, ಪೂಜೆ ನಡೆಯುವುದು. ಸಂಜೆ 7 ಗಂಟೆಗೆ ಶ್ರೀ ಗುರುಭಜನೆ, ಶಾಸ್ತ್ರ ಪ್ರವಚನ ನಡೆಯುವುದು. ಪ್ರತಿ ದಿನ ಸಾಯಂಕಾಲ ಭಜನೆ



ಹಾಗೂ ಸಾಂಸ್ಕೃತಿಕ, ಧಾರ್ಮಿಕ, ಸಂಗೀತ ಕಾರ್ಯಕ್ರಮ ಜರುಗುವುದು ಎಂದು ತಿಳಿಸಿದರು.

ಎಪ್ರಿಲ್ 6ರಂದು ಮುಂಜಾನೆ ಸಕಲ ವಾದ್ಯಗಳೊಂದಿಗೆ ಶ್ರೀ ಸದ್ಗುರು ಸಚ್ಚಿದಾನಂದ ಸ್ವಾಮಿಗಳವರ ಭಾವಚಿತ್ರದ ಮೆರವಣಿಗೆ ಜರುಗುವುದು. ನಂತರ ಮಧ್ಯಾಹ್ನ 12ಕ್ಕೆ ಸಚ್ಚಿದಾನಂದ ಮಠದ ನಿತ್ಯ ಯೋಗ ಕೇಂದ್ರದ ಮಕ್ಕಳಿಂದ ಹಾಗೂ ಮಹಿಳೆಯರಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗುವುದು. ಮಧ್ಯಾಹ್ನ 1 ಗಂಟೆಗೆ ಪ್ರಸಾದ ವಿನಿಯೋಗ ನೆರವೇರುವುದು. ಅಂದು ಸಾಯಂಕಾಲ 6 ಗಂಟೆಗೆ ಸಚಿವ ಹೆಚ್.ಕೆ. ಪಾಟೀಲ, ಮಾಜಿ ಶಾಸಕ ಡಿ.ಆರ್. ಪಾಟೀಲ, ಸಚ್ಚಿದಾನಂದಮಠ ಟ್ರಸ್ಟ್ ಕಮಿಟಿ ಅಧ್ಯಕ್ಷ ಶಿವಮೂರ್ತೆಪ್ಪ ವಾಯ್. ಅಗಸಿಮನಿ ಇವರ ನೇತೃತ್ವದಲ್ಲಿ ಮಹಾರಥೋತ್ಸವ ಜರುಗುವುದು.

ಎ.7ರ ಮುಂಜಾನೆ ಕೌದಿ ಪೂಜೆಯೊಂದಿಗೆ ಕಾರ್ಯಕ್ರಮ ಮುಕ್ತಾಯವಾಗುವುದು. ಈ ಪುಣ್ಯ ಕಾರ್ಯಕ್ರಮಕ್ಕೆ ಸಕಲ ಭಕ್ತಾಧಿಗಳು ಬಂದು ಶ್ರೀ ಗುರು ಕೃಪೆಗೆ ಪಾತ್ರರಾಗಬೇಕೆಂದು ವಿನಂತಿಸಿದರು. ಪತ್ರಿಕಾಗೋಷ್ಠಿಯಲ್ಲಿ ಕಾರ್ಯದರ್ಶಿ ರವಿಕುಮಾರ ರಡ್ಡಿ, ಜಾತ್ರಾ ಕಮಿಟಿ ಅಧ್ಯಕ್ಷ ಯಲ್ಲಪ್ಪ ಬದಾಮಿ, ಟ್ರಸ್ಟಿಗಳಾದ ಸಿಕಂದರ ಬಡೇಖಾನ, ಸುರೇಶ ಮುಳಗುಂದ ಹಾಗೂ ಕೃಷ್ಣ ಎಚ್.ಹಡಪದ ಉಪಸ್ಥಿತರಿದ್ದರು.

**ರತನ್ ಟಾಟಾ ವ್ಯಕ್ತಿತ್ವ ಸಾಧನೆ ಕಾರ್ಯಕ್ರಮ ಟಾಟಾ ಸಮಾಜಸೇವೆಯಲ್ಲೂ ಪ್ರೇರಣೆ ವಿವಿಧ ಸ್ಪರ್ಧೆಗಳಲ್ಲಿ ವಿದ್ಯಾರ್ಥಿಗಳ ಸಕ್ರೀಯ ಪಾಲ್ಗೊಳ್ಳುವಿಕೆ**

# ಉತ್ಪನ್ನ ಮಾರಾಟ ಮಾಡುವುದೂ ಕಲೆ: ರೂಪಾ

■ ವಿಜಯಸಾಕ್ಷಿ ಸುದ್ದಿ, ಕೊಪ್ಪಳ

ಇಂದು ಮಾರುಕಟ್ಟೆಯಲ್ಲಿ ಉತ್ಪನ್ನವೊಂದನ್ನು ಗ್ರಾಹಕರಿಗೆ ತಲುಪಿಸುವುದು ಸವಾಲಿನ ಕೆಲಸ. ಅದಕ್ಕೂ ಕ್ರಿಯಾಶೀಲತೆ, ಜನರನ್ನು ತಲುಪುವ ಕಲೆ ಗೊತ್ತಿರಬೇಕು ಎಂದು ಮರಿಯಮ್ಮನಹಳ್ಳಿಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಪ್ರಾಧ್ಯಾಪಕಿ, ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಡಾ.ರೂಪಾ.ಪಿ.ಸಿ ಹೇಳಿದರು.

ನಗರದ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ವಾಣಿಜ್ಯ ವಿಭಾಗ ಹಾಗೂ ಆಂತರಿಕ ಗುಣಮಟ್ಟ ಭರವಸಾ ಕೋಶದ ಸಹಯೋಗದಲ್ಲಿ ಶುಕ್ರವಾರ ನಡೆದ ರತನ್ ಟಾಟಾ ವ್ಯಕ್ತಿತ್ವ ಮತ್ತು ಸಾಧನೆ ಕುರಿತ ಕಾರ್ಯಕ್ರಮ ಉದ್ಘಾಟನೆ ಹಾಗೂ ವಿವಿಧ ಸ್ಪರ್ಧೆಗಳಿಗೆ ಚಾಲನೆ ನೀಡಿ ಅವರು ಮಾತನಾಡಿದರು.




ಸರಕೊಂದು ಗ್ರಾಹಕನಿಗೆ ತಲುಪಬೇಕೆಂದರೆ ಹಲವು ಮಾರ್ಗಗಳಿವೆ. ಕರಪತ್ರ, ಜಾಹೀರಾತು, ಸೆಲೆಬ್ರಿಟಿಗಳ ಶಿಫಾರಸು, ಬಾಯಿ ಮಾತಿನ ಪ್ರಚಾರದ ಮೂಲಕ ಉತ್ಪನ್ನ ಗ್ರಾಹಕನಿಗೆ ತಲುಪುತ್ತದೆ. ಉತ್ಪನ್ನದ ಉತ್ತರೋತ್ತರ ಬೆಳವಣಿಗೆಗೆ ಗುಣಮಟ್ಟ, ಜನಸಾಮಾನ್ಯರಿಗೆ ಹೊರೆಯಾಗದ, ಉದ್ಯಮಿಗೆ ನಷ್ಟವಾಗದಂತೆ ದರ ನಿಗದಿಯೂ ಮುಖ್ಯ ಎಂದು ರೂಪಾ ಅಭಿಪ್ರಾಯಪಟ್ಟರು.

ಕಾಲೇಜಿನ ಆಂತರಿಕ ಗುಣಮಟ್ಟ ಭರವಸಾ ಕೋಶದ ಸಂಚಾಲಕರು ಮತ್ತು ವಾಣಿಜ್ಯ ವಿಭಾಗದ ಮುಖ್ಯಸ್ಥರಾದ ಡಾ.ಟಿ.ವಿ.ವಾರುಣಿ ಪ್ರಾಸ್ತಾವಿಕ ಮಾತನಾಡಿ, ರತನ್ ಟಾಟಾ ಬಡತನದಲ್ಲಿ ಹುಟ್ಟಿ ಬೆಳೆದು ಅನೇಕ ಸವಾಲುಗಳನ್ನು ಎದುರಿಸಿ ಉದ್ಯಮಿಯಾಗಿ ಸಾಧನೆ ಮಾಡಿದವರು. ಯಶಸ್ಸಿನ ಜೊತೆಗೆ ಸಮಾಜಮುಖಿ ಕಾರ್ಯಗಳನ್ನು ರೂಪಿಸಿ ಜನಸಾಮಾನ್ಯರಿಗೆ ಅನುಕೂಲ ಕಲ್ಪಿಸಿದ ವ್ಯಕ್ತಿತ್ವ ಅವರದ್ದು ಎಂದು ಸ್ಮರಿಸಿದರು.

ಟಾಟಾ ಅವರು ಬದುಕು ಯುವಪೀಳಿಗೆಗೆ, ಯುವ ಉದ್ಯಮಿಗಳಿಗೆ ಪ್ರೇರಣೆ. ಉದ್ಯಮದ ಕೌಶಲ್ಯಗಳನ್ನು ಕಲಿಸುವ ಯತ್ನವಾಗಿ ಉತ್ಪನ್ನ ಮಾರಾಟ ಮಾಡುವ ಬಗೆ, ನಾನು ಉದ್ಯಮಿಯಾದರೆ ಎನ್ನುವ ವಿಷಯಗಳ ಮೇಲೆ ಭಾಷಣ ಸೇರಿದಂತೆ ವಿವಿಧ ಸ್ಪರ್ಧೆ ಆಯೋಜಿಸಲಾಗಿಥ ಎಂದರು.

ಶಿವಮೂರ್ತಿಸ್ವಾಮಿ ಗುತ್ತೂರು ನಿರೂಪಿಸಿದರು. ಡಾ.ವೀರಣ್ಣ ಸಜ್ಜನರ ಸ್ವಾಗತಿಸಿದರು. ಪವಿತ್ರಾ ಹೊಸೂರು ಪ್ರಾರ್ಥಿಸಿದರು. ಬಿ.ಡಿ.ಮಾಳೆಕೊಪ್ಪ ವಂದಿಸಿದರು. ಜ್ಞಾನೇಶ್ವರ ಪತ್ತಾರ, ಡಾ.ಗಿರಿಜಾ ತುರಮುರಿ, ಬಾಲಾಜಿ ವಿವಿಧ ಸ್ಪರ್ಧೆಗಳ ತೀರ್ಪುಗಾರರಾಗಿ ಆಗಮಿಸಿದ್ದರು. ಕಲ್ಲೇಶ್ ಅಬ್ಬಿಗೇರಿ, ಫಾಹೀಮಾ ಬೇಗಂ, ಅಶೋಕ ಯಕ್ಲಾಸಪುರ, ಶಿವರಾಮು, ಬಸವರಾಜ ಕರುಗಲ್ ಮತ್ತು ವಿದ್ಯಾರ್ಥಿಗಳು ಇದ್ದರು.

# ರಂಝಾನ್ ಹಬ್ಬದಂದು ರಸ್ತೆಯಲ್ಲಿ ನಮಾಝ್ ಮಾಡಿದ್ರೆ ಕ್ರಿಮಿನಲ್ ಕೇಸ್, ಪಾಸ್‌ಪೋರ್ಟ್- ಲೈಸನ್ಸ್ ರದ್ದು!

■ ವಿಜಯಸಾಕ್ಷಿ ಸುದ್ದಿ, ಮೀರತ್

ಈದುಲ್ ಫಿತರ್ (ರಂಝಾನ್) ಹಬ್ಬಕ್ಕೂ ಮುನ್ನ ನಗರದಲ್ಲಿ ಭದ್ರತಾ ಕ್ರಮಗಳನ್ನು ಹೆಚ್ಚಿಸಿರುವ ಉತ್ತರ ಪ್ರದೇಶದ ಮೀರತ್ ಪೊಲೀಸರು, ರಸ್ತೆಯಲ್ಲಿ ನಮಾಝ್ ಮಾಡದಂತೆ ಎಚ್ಚರಿಕೆ ನೀಡಿದ್ದಾರೆ. ಉಲ್ಲಂಘಿಸುವವರ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುವುದು. ಪಾಸ್‌ಪೋರ್ಟ್ ಮತ್ತು ಡ್ರೈವಿಂಗ್ ಲೈಸನ್ಸ್ ರದ್ದುಗೊಳಿಸಲಾಗುವುದು ಎಂದಿದ್ದಾರೆ.

ಬುಧವಾರ, ಮೀರತ್ ಪೊಲೀಸರು ಜಿಲ್ಲಾ ಮ್ಯಾಜಿಸ್ಟ್ರೇಟ್ ಡಾ. ವಿಜಯ್ ಕುಮಾರ್ ಸಿಂಗ್ ಅವರಿಗೆ ಎಂಟು ಜನರ ಪಟ್ಟಿಯನ್ನು ಸಲ್ಲಿಸಿದ್ದು, ಅವರು ಕಳೆದ ವರ್ಷದ ಈದ್ ಸಮಯದಲ್ಲಿ ರಸ್ತೆಯಲ್ಲಿ ನಮಾಝ್ ಮಾಡಬಾರದು ಎಂಬ ಆದೇಶವನ್ನು ಉಲ್ಲಂಘಿಸಿದ್ದಾರೆ ಎಂದು ಆರೋಪಿಸಿದ್ದಾರೆ. ಪೊಲೀಸರು ಆ ಎಂಟು ಜನರ ಡ್ರೈವಿಂಗ್ ಲೈಸನ್ಸ್ ಮತ್ತು ಪಾಸ್‌ಪೋರ್ಟ್‌ಗಳನ್ನು ರದ್ದುಗೊಳಿಸುವ ಪ್ರಕ್ರಿಯೆ ಪ್ರಾರಂಭಿಸಿದ್ದಾರೆ.




"ಜನರು ಹತ್ತಿರದ ಮಸೀದಿಯಲ್ಲಿ ನಮಾಝ್ ಮಾಡಬೇಕು ಅಥವಾ ಸಮಯಕ್ಕೆ ಸರಿಯಾಗಿ ಈದ್ಗಾ ತಲುಪಬೇಕು ಎಂದು ನಾವು ಮನವಿ ಮಾಡಿದ್ದೇವೆ. ಯಾವುದೇ ಕಾರಣಕ್ಕೂ ರಸ್ತೆಗಳಲ್ಲಿ ಪ್ರಾರ್ಥನೆಗೆ ಅವಕಾಶ ನೀಡಲಾಗುವುದಿಲ್ಲ ಎಂದು ನಾವು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಿದ್ದೇವೆ" ಎಂದು ಮೀರತ್ ನಗರ ಎಸ್ಪಿ ಆಯುಷ್ ವಿಕ್ರಮ್ ಸಿಂಗ್ ಹೇಳಿದ್ದಾರೆ.

"ಕಳೆದ ವರ್ಷ ಈದ್ ಹಬ್ಬದಂದು ಕೆಲವರು ರಸ್ತೆಯಲ್ಲಿ ನಮಾಝ್ ಮಾಡಿದ್ದರು. ನಾವು ಅವರ ವಿರುದ್ಧ ಎಫ್‌ಐಆರ್ ದಾಖಲಿಸಿದ್ದೇವೆ. ಈ ಬಾರಿಯೂ ಯಾರಾದರೂ ಓಪನ್ ಜಾಗದಲ್ಲಿ ಪ್ರಾರ್ಥನೆಗೆ ಕುಳಿತರೆ ಕಠಿಣ ಕ್ರಮ ಕೈಗೊಳ್ಳಲಾಗುವುದು. ನಾವು ನಿರಂತರವಾಗಿ ಮನವಿ ಮಾಡುತ್ತಿದ್ದೇವೆ" ಎಂದಿದ್ದಾರೆ.

ಒಬ್ಬ ವ್ಯಕ್ತಿಯ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಾದರೆ, ಅದು ಅವರ ಲೈಸನ್ಸ್ ಮತ್ತು ಪಾಸ್‌ಪೋರ್ಟ್ ರದ್ದತಿಗೆ ಕಾರಣವಾಗಬಹುದು. ಪ್ರಕರಣ ದಾಖಲಾದ ವ್ಯಕ್ತಿಗೆ ಪಾಸ್‌ಪೋರ್ಟ್ ಅಥವಾ ಲೈಸನ್ಸ್‌ಗೆ ಅರ್ಜಿ ಸಲ್ಲಿಸಲು ಎನ್‌ಒಸಿ (ನಿರಾಕ್ಷೇಪಣಾ ಪ್ರಮಾಣಪತ್ರ) ಸಿಗುವುದಿಲ್ಲ ಎಂದು ತಿಳಿಸಿದ್ದಾರೆ.

ಕವನ

## ಯುಗಾದಿ



ಬಂತೋ ಬಂತೋ ಯುಗಾದಿ ಬಂತೋ
ತಂತೋ ತಂತೋ ಸಡಗರ ತಂತೋ
ಸಿರಿ ತಂದಿತಪ್ಪ ಈ ಯುಗಾದಿ ಹಬ್ಬ
ಸಂತಸದ ರೂಪ ಈ ಯುಗಾದಿ ಹಬ್ಬ
ಮನೆಯ ಅಂಗಳದಿ ಬಣ್ಣದ ರಂಗೋಲಿ
ಮನೆಯ ಬಾಗಿಲು ಮಾವಿನ ತೋರಣ
ಊರ ತುಂಬೆಲ್ಲಾ ಹೊಸತು ನೋಡಾ
ನಾಡಿನ ಜನರ ಹಿಗ್ಗು ನೋಡಾ
ಹಬ್ಬದ ಸಿರಿಗೆ ತುಪ್ಪದ ಘಮ ಘಮ
ಹಸಿರಿನ ಗರಿಗೆ ಸಂಭ್ರಮದ ಸಮ ಸಮ
ಹರಿಯುವ ನೀರಲ್ಲಿ ತಲೆ ಎಣ್ಣೆ ಸ್ನಾನ
ನಾರಿಯರ ಮುಡಿ ತುಂಬ ಮಲ್ಲಿಗೆ
ನಾಡ ತುಂಬಾ ಸಂತಸ
ಎಲ್ಲೆಲ್ಲೂ ಹಬ್ಬದ ಸಡಗರ
ಸಿಹಿಯಾಗಿರೋ ಮನಸ್ಸಿಗೆ ಬೇವು ಬೆರಸಿ
ಹೋಳಿಗೆ ತಿಂದು ಬಾಳಿಗೆ ಸಿಹಿ ಬೆರೆಸಿ.

– ವಿ.ಎಂ.ಎಸ್ ಗೋಪಿ.
ಸಾಹಿತಿಗಳು, ಬೆಂಗಳೂರು.

**ಕಲಕೇರಿಯಲ್ಲಿ ಶ್ರೀ ರಂಭಾಪುರಿ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ, ಜನಜಾಗೃತಿ ಧರ್ಮ ಸಮಾರಂಭ**

# ಧರ್ಮಾಚರಣೆಯಿಲ್ಲದ ಮನುಷ್ಯನ ವ್ಯಕ್ತಿತ್ವಕ್ಕೆ ಬೆಲೆಯಿಲ್ಲ

■ ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಬದುಕು ಬದಲಾಗಬೇಕಾದರೆ ಬದುಕುವ ದಾರಿ ಬದಲಾಗಬೇಕು. ಸಂಸ್ಕಾರ ಮತ್ತು ಸಂಸ್ಕೃತಿ ಎಂಬ ಬೀಜ ಬಿತ್ತಿ ಜೀವನದಲ್ಲಿ ಸತ್ಫಲಗಳನ್ನು ಪಡೆದುಕೊಳ್ಳಬೇಕು. ಶಾಂತಿ-ನೆಮ್ಮದಿಯ ಬದುಕಿಗೆ ಮತ್ತು ಬದುಕು ಬಲಗೊಳ್ಳಲು ಆಧ್ಯಾತ್ಮಿಕ ಚಿಂತನಗಳು ಅವಶ್ಯಕವೆಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ.ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ಅವರು ಗುರುವಾರ ತಾಲೂಕಿನ ಕಲಕೇರಿ ಗ್ರಾಮದಲ್ಲಿ ಜರುಗಿದ ಶ್ರೀ ರಂಭಾಪುರಿ ಜಗದ್ಗುರುಗಳ ಅಡ್ಡಪಲ್ಲಕ್ಕಿ ಮಹೋತ್ಸವ ಹಾಗೂ ಜನಜಾಗೃತಿ ಧರ್ಮ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು.

ಹೊರಗಿನ ಮಾಲಿನ್ಯ ಕಳೆಯಲು ಹೊರಟ ಮನುಷ್ಯ ತನ್ನ ಅಂತರಂಗದಲ್ಲಿಯೇ ಕತ್ತಲೆ



ತುಂಬಿಕೊಂಡಿದ್ದಾನೆ. ಗೊತ್ತು-ಗುರಿಗಳಿಲ್ಲದೆ ಮನುಷ್ಯನ ಬದುಕು ತತ್ತರಿಸುತ್ತಿದೆ. ಉನ್ನತ ಗುರಿ ಮತ್ತು ಧ್ಯೇಯ ವ್ಯಕ್ತಿತ್ವ ವಿಕಾಸಕ್ಕೆ ದಾರಿದೀಪ. ಧರ್ಮಾಚರಣೆ ಇಲ್ಲದ ಮನುಷ್ಯನ ವ್ಯಕ್ತಿತ್ವಕ್ಕೆ ಬೆಲೆ, ನೆಲೆ ಸಿಗುವುದಿಲ್ಲ. ವ್ಯಕ್ತಿ ಸಂಪತ್ತು ಸಂಪಾದಿಸದಿದ್ದರೂ ಪರವಾಗಿಲ್ಲ. ಆದರೆ ಸದ್ಗುಣಗಳನ್ನು ಬೆಳೆಸಿಕೊಂಡು ಬಾಳುವುದನ್ನು ಕಲಿಯಬೇಕು. ಯುವ ಜನಾಂಗ ಈ ರಾಷ್ಟ್ರದ ಅಮೂಲ್ಯ ಸಂಪತ್ತು ಮತ್ತು ಆಸ್ತಿ. ಆಲಸ್ಯ ಮತ್ತು ದುರ್ವ್ಯಸನಗಳಿಂದ ದೂರವಾಗಿ ಸದೃಢ ಸಶಕ್ತ ರಾಷ್ಟ್ರ ನಿರ್ಮಾಣದಲ್ಲಿ ತೊಡಗಿಸಿಕೊಂಡರೆ ಅದ್ಭುತ ಸಾಧನೆ ಮಾಡಲು ಸಾಧ್ಯವಾಗುತ್ತದೆ. ಕಲಕೇರಿ ಗ್ರಾಮದಲ್ಲಿ ಹುಟ್ಟಿ ಬೆಳೆದು ಧರ್ಮ ಸಂಸ್ಕೃತಿ ಆದರ್ಶಗಳನ್ನು ಅನುಸರಿಸಿ ಬಾಳುತ್ತಿರುವ ಮಾಜಿ ಸಚಿವ ಎಸ್. ಎಸ್. ಪಾಟೀಲ ಮತ್ತು ಅವರ ಚಿರಂಜೀವಿ ಶಿವಕುಮಾರಗೌಡ ಪಾಟೀಲರ ಈ ಸತ್ಕಾರ್ಯ ನಾಡಿನ ಜನರ ಮನದಲ್ಲಿ ಅಚ್ಚಳಿಯದ ಪ್ರಭಾವ ಬೀರುವುದೆಂದು ಹರುಷ ವ್ಯಕ್ತ ಪಡಿಸಿದರು.

ಸಮ್ಮುಖ ವಹಿಸಿದ್ದ ವಿರೂಪಾಪುರ ಕಲಕೇರಿ ಮುದುಕೇಶ್ವರ ಶಿವಾಚಾರ್ಯರು ಮಾತನಾಡಿ, ತಾಳ್ಮೆ ಮತ್ತು ಸಹನೆಯ ಗುಣ ಮನುಷ್ಯನಲ್ಲಿ ಇಲ್ಲದಿರುವುದೇ ಇಂದಿನ ಅಶಾಂತಿಗೆ ಕಾರಣ ಬದುಕಿನ ಬೆಂಗಾಡು ಸಮೃದ್ಧಗೊಳ್ಳಲು ಗುರು ಮತ್ತು ದೇವರ ಕೃಪೆ ಅವಶ್ಯಕವೆಂದರು.

ನುಡಿ ನೈವೇದ್ಯ ಸಲ್ಲಿಸಿದ ಹಂಪಸಾಗರದ ಅಭಿನವ ಶಿವಲಿಂಗ ರುದ್ರಮುನಿ ಶಿವಾಚಾರ್ಯರು, ಅಧ್ಯಕ್ಷತೆ ವಹಿಸಿದ ಮಾಜಿ ಸಚಿವ ಎಸ್. ಎಸ್. ಪಾಟೀಲ, ನ್ಯಾಯವಾದಿಗಳಾದ ವೀರೇಶ ಕೂಗು ಮಾತನಾಡಿದರು.

> ಸಮಾರಂಭ ಉದ್ಘಾಟಿಸಿದ ಕ.ಸಾ.ಪ. ಮಾಜಿ ಅಧ್ಯಕ್ಷ ಮನು ಬಳಿಗಾರ ಮಾತನಾಡಿ, ಚಿತೆ ನಿರ್ಜೀವ ವಸ್ತುಗಳನ್ನು ಸುಡುತ್ತದೆ. ಚಿಂತೆ ಸಜೀವ ವಸ್ತುಗಳನ್ನು ನಾಶಗೊಳಿಸುತ್ತದೆ. ಚಿಂತೆ ಚಿಂತನೆಗೊಳಗಾದಾಗ ಬದುಕು ಸಾರ್ಥಕಗೊಳ್ಳುತ್ತದೆ. ಸಕಲ ಜೀವಾತ್ಮರಿಗೂ ಲೇಸನ್ನೇ ಬಯಸಿದ ಶ್ರೀ ಜಗದ್ಗುರು ರೇಣುಕಾಚಾರ್ಯರು ಮತ್ತು ಬಸವಣ್ಣನವರು ಸಮಾಜದ ಎರಡು ಕಣ್ಣು. ಅಧರ್ಮದ ಕವಚ ಹೊತ್ತ ವಿಚಾರಗಳು ಬಹಳ ಕಾಲ ಉಳಿಯುವುದಿಲ್ಲ. ಸತ್ಯ-ಧರ್ಮ ಉಳಿಯಬೇಕು ಮತ್ತು ಬೆಳೆಯಬೇಕೆಂದರು.

ಸಮಾರಂಭದಲ್ಲಿ ಬಂಕಾಪುರ ರೇವಣಸಿದ್ಧೇಶ್ವರ ಶಿವಾಚಾರ್ಯರು, ಹಿರೇವಡ್ಡಟ್ಟಿ ವೀರೇಶ್ವರ ಶಿವಾಚಾರ್ಯರು, ಬನ್ನಿಕೊಪ್ಪದ ಡಾ. ಸುಜ್ಞಾನದೇವ ಶಿವಾಚಾರ್ಯರು, ಸೂಡಿ ಡಾ. ಕೊಟ್ಟೂರು ಬಸವೇಶ್ವರ ಶಿವಾಚಾರ್ಯರು, ಸಿದ್ಧರಬೆಟ್ಟ-ಅಬ್ಬಿಗೇರಿ ವೀರಭದ್ರ ಶಿವಾಚಾರ್ಯರು, ಮಾನೆಹಳ್ಳಿ ಮಳಿಯೋಗೇಶ್ವರ ಶಿವಾಚಾರ್ಯರು, ಹರಪನಹಳ್ಳಿ ವರಸದ್ಯೋಜಾತ ಶಿವಾಚಾರ್ಯರು, ಶಾಸಕ ಡಾ.ಚಂದ್ರು ಲಮಾಣಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳಿಂದ ಗುರು ರಕ್ಷೆ ಸ್ವೀಕರಿಸಿದರು.

ಸಮಾರಂಭದ ಸಮ್ಮುಖವನ್ನು ವಿರುಪಾಪುರ ಕಲಕೇರಿ ಮುದುಕೇಶ್ವರ ಶಿವಾಚಾರ್ಯ ಸ್ವಾಮಿಗಳು ವಹಿಸಿದ್ದರು. ಶಿವಕುಮಾರಗೌಡ ಎಸ್.ಪಾಟೀಲ ಸ್ವಾಗತಿಸಿದರು. ಸವಣೂರಿನ ಡಾ. ಗುರುಪಾದಯ್ಯ ಸಾಲಿಮಠ ನಿರೂಪಿಸಿದರು.

# ಶ್ರೀ ಮಾರುತೇಶ್ವರ ಜಾತ್ರೆ ಎಪ್ರಿಲ್ 2ಕ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಸಮಿಪದ ತಿಮ್ಮಾಪೂರ ಗ್ರಾಮದಲ್ಲಿ ಯುಗಾದಿ ಹಬ್ಬದ ಅಂಗವಾಗಿ ಶ್ರೀ ಮಾರುತೇಶ್ವರ ಮಹಾ ರಥೋತ್ಸವ ಎಪ್ರಿಲ್ 2ರಂದು ಜರುಗಲಿದೆ. ಅಂದು ಮಾರುತೇಶ್ವರ ದೇವರ ಮೂರ್ತಿಗೆ ವಿಶೇಷ ಪೂಜೆ ಸಲ್ಲಿಸಿದ ನಂತರ ಸಂಜೆ 5.30ಕ್ಕೆ ಮಹಾ ರಥೋತ್ಸವ ಜರುಗಲಿದೆ.

ಇದಕ್ಕೂ ಮುನ್ನ ಮಾರ್ಚ್ 29ರಂದು ದೇವಸ್ಥಾನದಲ್ಲಿ ಅಮಾವಾಸ್ಯೆ ಪೂಜೆ, ಮಾ.30ರಂದು ಪಾಂಡ್ಯಹ ಗೋಪಾಳ ದಾಸಂಗ ತುಂಬಿಸುವುದು, ಮಾ.31ರಂದು ದೀಪ ಮಾಲಿ ಕಂಬಕ್ಕೆ ಪಂಚಾಮೃತ ಅಭಿಷೇಕ ಹಾಗೂ ಎಪ್ರಿಲ್ 1ರಂದು ರಾತ್ರಿ 9.30 ಗಂಟೆಗೆ ಬಣ್ಣದ ಹೊಂಡ ತುಳಿಕಿಸುವುದು, ನಂತರ ಲಘು ರಥೋತ್ಸವ ಜರುಗಲಿದೆ.

ಜಾತ್ರಾ ಮಹೋತ್ಸವದ ಪ್ರಯುಕ್ತ ಶ್ರೀ ಲಕ್ಷ್ಮೀನಾರಾಯಣ ಹಾಗೂ ಶ್ರೀ ಬೀರಲಿಂಗೇಶ್ವರ ಕಲಾವಿದರಿಂದ 'ಸಾಕು ಮಗನ ಗೋಳಾಟ' ಎಂಬ ಸಾಮಾಜಿಕ ನಾಟಕ ಪ್ರದರ್ಶನ, ಜೈ ಹನುಮಾನ ಸ್ಪೋರ್ಟ್ಸ್ ಕ್ಲಬ್ ವತಿಯಿಂದ ಹೊನಲು ಬೆಳಕಿನ ಕಬಡ್ಡಿ ಪಂದ್ಯಾವಳಿ, ತಿಮ್ಮಾಪೂರ ಪಿ.ಕೆ ಪ್ರೀಮಿಯರ್ ಲೀಗ್ ವತಿಯಿಂದ ಕ್ರಿಕೆಟ್ ಪಂದ್ಯಾವಳಿ ಹಾಗೂ 1997ರ ತಂಡದ ವಿದ್ಯಾರ್ಥಿಗಳಿಂದ ಸಂಗೀತ ರಸಮಂಜರಿ ಕಾರ್ಯಕ್ರಮಗಳು ಜರುಗಲಿವೆ ಎಂದು ಜಾತ್ರಾ ಟ್ರಸ್ಟ್ ಕಮಿಟಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಾ.30, 31ಕ್ಕೆ ಶ್ರೀ ಗ್ರಾಮ ದೇವತೆಗಳ ಜಾತ್ರಾ ಮಹೋತ್ಸವದ ಅಂಗವಾಗಿ ರಾಜ್ಯಮಟ್ಟದ ಪಂದ್ಯ

# ಕುಸ್ತಿಯ ತವರೂರಲ್ಲಿ ಪೈಲ್ವಾನರ ಕರಾಮತ್ತು

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ಜಕ್ಕಲಿ ಗ್ರಾಮದಲ್ಲಿ ಮಾ. 30ರಂದು ಬಯಲು ಕುಸ್ತಿ, ಮಾ. 31ರಂದು ಥೇಟರ್ ಕುಸ್ತಿ ಪಂದ್ಯಾವಳಿಯನ್ನು ಆಯೋಜಿಸಲಾಗಿದೆ ಎಂದು ಶ್ರೀ ಮಾರುತೇಶ್ವರ ವ್ಯಾಯಾಮ ಶಾಲೆಯ ಸಂಘಟಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಯುಗಾದಿ ಹಬ್ಬದ ಅಂಗವಾಗಿ ಶ್ರೀ ಮಾರುತೇಶ್ವರ ಹೊಂಡ ತುಳುಕಿಸುವ ಕಾರ್ಯಕ್ರಮ, ಶ್ರೀ ಗ್ರಾಮ ದೇವತೆಗಳ ಜಾತ್ರಾ ಮಹೋತ್ಸವ ಹಾಗೂ ಪೈಲ್ವಾನ್ ದಿ.ಮೂಕಪ್ಪಜ್ಜ ಸಂಕನೂರ ಅವರ 17ನೇ ವರ್ಷದ ಪುಣ್ಯಾರಾಧನೆಯ ನಿಮಿತ್ತ ಬಸ್ ನಿಲ್ದಾಣ ಹತ್ತಿರದ ತೋಟಪ್ಪನವರು ಕಡಗದ ಇವರ ಜಮೀನಿನಲ್ಲಿ ಸಂಜೆ 4ಕ್ಕೆ ಕುಸ್ತಿ ಪಂದ್ಯಾವಳಿಗಳು ಶಾಖಾ ಶಿವಯೋಗ ಮಂದಿರ ನಿಡಗುಂದಿ ಕೊಪ್ಪದ ಅಭಿನವ ಚನ್ನಬಸವ ಸ್ವಾಮೀಜಿಯವರ ಅಮೃತ ಹಸ್ತದಿಂದ ಉದ್ಘಾಟನೆ ನೆರವೇರಲಿದೆ.

ಸ್ಪರ್ಧೆಯಲ್ಲಿ ರಾಜ್ಯದ ವಿವಿಧ ಜಿಲ್ಲೆಗಳಿಂದ ಕುಸ್ತಿ ಕ್ರೀಡಾಪಟುಗಳು ಪಾಲ್ಗೊಳ್ಳಲಿದ್ದಾರೆ. ಗ್ರಾಮದ ಹಿರಿಯ ಕುಸ್ತಿಪಟುಗಳಾದ ಗಾಂಧೆಪ್ಪ ಕುರಿ, ಧರ್ಮಣ್ಣ ಆರೇರ, ಯಲ್ಲಪ್ಪ ಮಡಿವಾಳರ ನಿರ್ಣಾಯಕರಾಗಿ ಆಗಮಿಸಲಿದ್ದಾರೆ. ಪಂದ್ಯಾವಳಿಯಲ್ಲಿ ಕುಸ್ತಿಪಟುಗಳಿಗೆ



ವಿಶೇಷ ಬಹುಮಾನಗಳನ್ನು ನೀಡಲಾಗುವುದು. ಪರಸ್ಥಳದ ಕ್ರೀಡಾಪಟುಗಳಿಗೆ ಊಟದ ವ್ಯವಸ್ಥೆ ಇರುತ್ತದೆ.

ಕುಸ್ತಿಯ ತವರೂರು ಎಂಬ ಖ್ಯಾತಿಗೆ ಹೆಸರಾದ ಜಕ್ಕಲಿ ಗ್ರಾಮದಲ್ಲಿ ಸರಿಸುಮಾರು 80 ವರ್ಷಗಳಿಂದ ಇಲ್ಲಿಯವರೆಗೆ ದೇಸೀ ಆಟವಾದ ಕುಸ್ತಿಯನ್ನು ಆರಾಧಿಸುತ್ತಾ, ಆಡುತ್ತಾ ಅದನ್ನು ಬೆಳಸುವುದರ ಜೊತೆಗೆ ಮುಂದಿನ ಯುವ ಜನಾಂಗಕ್ಕೆ ಹಿರಿಯರು ಅದನ್ನು ಕಾಣಿಕೆಯಾಗಿ ನೀಡುತ್ತ ಬಂದಿದ್ದಾರೆ. ಗ್ರಾಮದಲ್ಲಿ 1959ರಲ್ಲಿ ಒಂದು ಸುಸಜ್ಜಿತವಾದ ಗರಡಿ ವ್ಯಾಯಮ ಶಾಲೆ ಸ್ಥಾಪನೆಯಾಗಿದ್ದು, ಅದು ಗ್ರಾಮದಲ್ಲಿ ಅಷ್ಟೇ ಅಲ್ಲದೆ ಅಕ್ಕ ಪಕ್ಕದ ಊರುಗಳಲ್ಲಿಯ ಕುಸ್ತಿಪಟುಗಳು ಇಲ್ಲಿಂದಲ್ಲೇ ತಾಲೀಮ್‌ಗಳನ್ನು ನಡೆಸಿ ಸಿದ್ಧರಾಗುತ್ತಿದ್ದಾರೆ.

ಹೆಚ್ಚಿನ ಮಾಹಿತಿಗಾಗಿ ಶೇಖರ ಯಾವಗಲ್ಲ–8095126277, ಸಂಗಮೇಶ ಮೆಣಸಗಿ–9480123603 ಇವರನ್ನು ಸಂಪರ್ಕಿಸಲು ಕೋರಲಾಗಿದೆ.

ಗ್ರಾಮದ ಯುವಕರನ್ನು ಆಕರ್ಷಿಸಿ ಶಕ್ತಿ ಮತ್ತು ಯುಕ್ತಿಯ ಪ್ರತೀಕವಾದ ಕುಸ್ತಿ ಕ್ರೀಡೆಗೆ ಹಿರಿಯರು ಹಿಂದಿನಿಂದಲೂ ಪ್ರೋತ್ಸಾಹ ನೀಡುತ್ತ ಬಂದಿದ್ದಾರೆ. ಕುಸ್ತಿ ಅಂದಿನ ಮನರಂಜನಾ ಕ್ರೀಡೆಯೊಂದಿಗೆ ಶಕ್ತಿ ಪ್ರದರ್ಶನದ ಕಲೆಯಾಗಿತ್ತು. ಆಗ ಅಲ್ಲಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಅಖಾಡಾಗಳು ಕಂಡು ಬರುತ್ತಿದ್ದವು. ಜಕ್ಕಲಿ ಗ್ರಾಮದಲ್ಲಿ ಹೆಚ್ಚಿನ ಪ್ರಸಿದ್ಧ ಪೈಲವಾನರು ಇರುವದರಿಂದ ಕುಸ್ತಿಯ ತವರೂರಾಗಿ ಅದು ಇಂದಿಗೂ ಮುಂದುವರೆದಿದೆ. ಕುಸ್ತಿಯನ್ನು ಉಳಿಸಿ ಬೆಳಸುವ ಉದ್ದೇಶದೊಂದಿಗೆ ಪ್ರತಿವರ್ಷ ಇಲ್ಲಿಯ ಶ್ರೀ ಮಾರುತಿ ಗರಡಿ ವ್ಯಾಯಾಮ ಶಾಲೆಯ ಯುವಕರು ಟೊಂಕಕಟ್ಟಿ ನಿಂತಿದ್ದಾರೆ. ಇದಕ್ಕೆಲ್ಲಾ ಮುಖ್ಯ ಕಾರಣಿಕರ್ತರು ಪೈಲ್ವಾನ ದಿ. ಬಸಪ್ಪಜ್ಜ ಕೋರಿ ಹಾಗೂ ಹೆಸರುವಾಸಿ ಪ್ರಸಿದ್ಧ ಪೈಲವಾನ ದಿ. ಮೂಕಪ್ಪಜ್ಜ ಸಂಕನೂರರು.



### ಆಝಾದ್ ಬ್ಯಾಂಕ್‌ನ ನೂತನ ಕಟ್ಟಡ ನಿರ್ಮಾಣಕ್ಕೆ ಭೂಮಿ ಪೂಜೆ

# ಹೆಚ್ಚಿನ ಸೌಲಭ್ಯ ನೀಡಲು ಬ್ಯಾಂಕ್ ಸನ್ನದ್ಧ



■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಪ್ರತಿಷ್ಠಿತ ಸಹಕಾರಿ ಬ್ಯಾಂಕ್‌ಗಳಲ್ಲಿ ಒಂದಾಗಿರುವ ದಿ.ಆಝಾದ್ ಕೋ-ಆಪ್ ಬ್ಯಾಂಕ್‌ನ ಪ್ರಧಾನ ಕಚೇರಿಯ ನೂತನ ಕಟ್ಟಡ ನಿರ್ಮಾಣ ಕಾರ್ಯಕ್ಕೆ ಶುಕ್ರವಾರ ಬ್ಯಾಂಕ್‌ನ ಚೇರಮನ್ ಜನಾಬ ಸರ್ಫರಾಜಅಹ್ಮದ್ ಉಮಚಗಿ ಭೂಮಿ ಪೂಜೆ ನೆರವೇರಿಸಿದರು.

ಗದಗ ಗಂಗಾಪೂರಪೇಟೆಯಲ್ಲಿ ಸದ್ಯ ಕಾರ್ಯನಿರ್ವಹಿಸುತ್ತಿರುವ ಪ್ರಧಾನ ಕಚೇರಿಯ ಪಕ್ಕದಲ್ಲಿಯೇ ನೂತನ ಕಟ್ಟಡ ನಿರ್ಮಾಣಕ್ಕೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಔಪಚಾರಿಕವಾಗಿ ಮಾತನಾಡಿದ ಚೇರಮನ್ ಸರ್ಫರಾಜಅಹ್ಮದ್ ಉಮಚಗಿ, ಬ್ಯಾಂಕ್ ಪ್ರಗತಿಯಲ್ಲಿ ಇದೊಂದು ಮೈಲಿಗಲ್ಲಾಗಿದ್ದು, ಬರಲಿರುವ ದಿನಗಳಲ್ಲಿ ಗ್ರಾಹಕರಿಗೆ ಇನ್ನೂ ಹೆಚ್ಚಿನ ಸೌಲಭ್ಯ ನೀಡಲು ಬ್ಯಾಂಕ್ ಸನ್ನದ್ಧಗೊಳ್ಳಲಿದೆ ಎಂದರು.

ಈ ಸಂದರ್ಭದಲ್ಲಿ ಬ್ಯಾಂಕ್‌ನ ಉಪಾಧ್ಯಕ್ಷ ಹುಲಗಣ್ಣ ಬಳ್ಳಾರಿ, ಹಿರಿಯ ನಿರ್ದೇಶಕರಾದ ರಾಜೇಸಾಬ ಬಾಗಲಕೋಟ, ಇಕ್ಬಾಲ್ ಹಣಗಿ, ಪರಶುರಾಮ ಪಾತ್ರೋಟ, ಯಲ್ಲಪ್ಪ ತೋಟದ, ಶಾನವಾಜ ಉಮಚಗಿ, ಗಣ್ಯರಾದ ಜಾಫರಸಾಬ ಕರಡಿ, ಡಾ. ಎಂ.ಡಿ. ಸಾಮುದ್ರಿ, ಶಾಮಾಜ್ ಉಮಚಗಿ, ಮಹೇಶ್ವರಯ್ಯ ಕೊಟಗುಣಸಿಮಠ, ಬ್ಯಾಂಕ್‌ನ ವ್ಯವಸ್ಥಾಪಕ ನಿರ್ದೇಶಕ ಎ.ಜಿ. ಯರಗುಡಿ ಸೇರಿದಂತೆ ಬ್ಯಾಂಕ್ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಸಿದ್ದೇಶ್ವರ ಜಾತ್ರಾ ಮಹೋತ್ಸವ ನಾಳೆಯಿಂದ

■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಐತಿಹಾಸಿಕ ಸಿದ್ದೇಶ್ವರ ಜಾತ್ರಾ ಮಹೋತ್ಸವವು ಮಾರ್ಚ್ 30ರಂದು ನೆರವೇರಲಿದೆ ಎಂದು ಜಾತ್ರಾ ಸಮಿತಿ ಅಧ್ಯಕ್ಷ ಬಸವರಾಜ ಸುಂಕಾಪೂರ ತಿಳಿಸಿದರು.

ಅಂದು ಬೆಳಿಗ್ಗೆ ಸಿದ್ದೇಶ್ವರ ಮೂರ್ತಿಗೆ ವಿಶೇಷ ಅಭಿಷೇಕ, ಸಾಯಂಕಾಲ 5 ಗಂಟೆಗೆ ಮಾಹಾ ರಥೋತ್ಸವ, ನಂತರ ಅನುಭಾವ ಗೋಷ್ಠಿಯ ಸಾನ್ನಿಧ್ಯವನ್ನು ಮುಳಗುಂದ ಗವಿಮಠದ ಮಲ್ಲಿಕಾರ್ಜುನ ಮಾಹಾಸ್ವಾಮೀಜಿ ವಹಿಸಿಕೊಳ್ಳುವರು.

ಸಮ್ಮುಖವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು ವಹಿಸುವರು.

ಧಾರವಾಡದ ಬಸವಾನಂದ ಮಾಹಾಸ್ವಾಮಿಗಳು ಉಪನ್ಯಾಸ ನೀಡುವರು. ಅಧ್ಯಕ್ಷತೆಯನ್ನು ಎಸ್.ಎಂ. ನೀಲಗುಂದ ವಹಿಸಲಿದ್ದು, ಗೌರಮ್ಮಾ ಬಡ್ನಿ ಕಾರ್ಯಕ್ರಮ



ಉದ್ಘಾಟಿಸುವರು. ಮುಖ್ಯ ಅತಿಥಿಗಳಾಗಿ ಕಾಶೀನಾಥ ಮರಿದೇವರಮಠ, ಎಂ.ಡಿ. ಬಟ್ಟೂರ, ಡಾ. ಎಸ್.ಸಿ. ಚವಡಿ, ಡಾ. ಬಸವರಾಜ ಬಮ್ಮನಹಳ್ಳಿ, ರಾಮಣ್ಣಾ ಕಮಾಜಿ, ಅಶೋಕ ಸೋನಗೋಜಿ, ನಾಗರಾಜ ದೇಶಪಾಂಡೆ, ಇಮ್ಮಣ್ಣಾ ಚವಳಿಕಾಯಿ, ಫಕ್ಕೀರಯ್ಯ ಅಮೋಘಿಮಠ, ಮಾಹಾಂತಪ್ಪ ನೀಲಗುಂದ, ಮಾಹಾದೇವಪ್ಪ ಹುಬ್ಬಳ್ಳಿ, ಚಂಬಣ್ಣಾ ಲಕ್ಷ್ಮೇಶ್ವರ, ಗುರಣ್ಣಾ ಜವಳಿಶೆಟ್ರ, ಹೊನ್ನಪ್ಪ ಜೋಗಿ, ಮರಿಯಪ್ಪ ನಡಗೇರಿ, ಎ.ಡಿ. ಮುಜಾವಾರ , ಎಂ.ಎಂ. ಜಮಾಲಸಾಬಮವರ , ಸಂಗೀತ ಸೇವೆ ವಿಜಯಲಕ್ಷ್ಮೀ ಹಿರೇಮಠ ಪಾಲ್ಗೊಳ್ಳುವರು. ಮಾರುತಿ ಭಜನಾ ಸಂಘ ಮುಳಗುಂದ ಹಾಗೂ ಸರಕಾರಿ ಶಾಲಾ ಮಕ್ಕಳಿಂದ ಸಾಂಸ್ಕೃತಿ ಕಾರ್ಯಕ್ರಮ ಜರಗುವುದು.

ಮಾ. 31ರಂದು ಸಾಯಂಕಾಲ 5 ಗಂಟೆಗೆ ಕಡುಬಿನ ಕಾಳಗ ನಡೆಯಲಿದೆ. ಅನುಭಾವ ಗೋಷ್ಠಿಯ ಸಾನ್ನಿಧ್ಯವನ್ನು ನವಲಗುಂದ ಗವಿಮಠದ ಬಸವಲಿಂಗ ಮಾಹಾಸ್ವಾಮಿಗಳು ವಹಿಸಿಕೊಳ್ಳುವರು.

ಸಮ್ಮುಖವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗ ದೇವರು, ಉಪನ್ಯಾಸಕರಾಗಿ ಜಂತ್ಲಿಶಿರೂರದ ಗವಿಸಿದ್ದಯ್ಯ ಹಳ್ಳಿಕೇರಿಮಠ, ಅಧ್ಯಕ್ಷತೆಯನ್ನು ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಕೆ.ಎಚ್. ಪಾಟೀಲ್ ಬಹಿಸುವರು.

ಅತಿಥಿಗಳಾಗಿ ಬಿ.ವಿ. ಸುಂಕಾಪೂರ, ಎಸ್.ಸಿ. ಬಡ್ನಿ, ಕೆ.ಎಲ್. ಕರಿಗೌಡರ, ವಿಜಯ ನೀಲಗುಂದ, ಸಂಜಯ ನೀಲಗುಂದ, ದ್ಯಾಮಣ್ಣಾ ನೀಲಗುಂದ, ಅಶೋಕ ಹುಣಸೀಮರದ, ಮಾಹಾದೇವಪ್ಪಾ ಗಡಾದ, ಬಸವರಾಜ ಹಾರೋಗೇರಿ, ಮನ್ನೂರ ಹಣಗಿ, ಶಿವಬಸವ ಹಸಬಿ, ಹೊನ್ನಪ್ಪ ನೀಲಗುಂದ, ಡಿ.ಎಂ. ನಿಂಗಪ್ಪನವರ, ಗುಡದಪ್ಪ ಘಂಟಿ ಪಾಲ್ಗೊಳ್ಳುವರು. ವಿಜಯಲಕ್ಷ್ಮೀ ಹಿರೇಮಠ ಸಂಗಡಿಗರಿಂದ ಸಂಗೀತ ಸೇವೆ, ಕೊಪ್ಪಳದ ಅಜೇಯ ಮ್ಯೂಜಿಕಲ್ ಅಕಾಡೆಮಿ ಇವರಿಂದ ರಸಮಂಜರಿ ಕಾರ್ಯಕ್ರಮ ಜರುಗಲಿದೆ.

### ಗ್ರಾಮದೇವತೆಗಳ ಜಾತ್ರಾ ಮಹೋತ್ಸವದ ಅಂಗವಾಗಿ ಬಯಲಾಟ ಪ್ರದರ್ಶನ

# ಬಯಲಾಟ ಕಲೆ ಉಳಿಸಿ ಪ್ರೋತ್ಸಾಹಿಸಿ

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಇಂದಿನ ದೃಶ್ಯ ಮಾಧ್ಯಮಗಳ ಭರಾಟೆಯಲ್ಲಿ ಗ್ರಾಮೀಣ ಪ್ರದೇಶದ ದೊಡ್ಡಾಟ, ಬಯಲಾಟದಂತಹ ಕಲೆಗಳು ಮರೆಯಾಗುತ್ತಿದ್ದು, ಅವುಗಳನ್ನು ಉಳಿಸಿ ಪ್ರೋತ್ಸಾಹಿಸಬೇಕು ಎಂದು ಮುಖಂಡ ಮಿಥುನ ಪಾಟೀಲ ಹೇಳಿದರು.

ಅವರು ಸಮೀಪದ ಜಕ್ಕಲಿ ಗ್ರಾಮದಲ್ಲಿ ಗ್ರಾಮದೇವತೆಗಳ ಜಾತ್ರಾ ಮಹೋತ್ಸವದ ಅಂಗವಾಗಿ ಲಕ್ಷ್ಮೀದೇವಿ ಬನಶಂಕರಿ ದೇವಿ ಬಯಲಾಟ ಸಂಘ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಗದಗ ಇವರ ಸಹಯೋಗದೊಂದಿಗೆ ಆಯೋಜಿಸಲಾಗಿದ್ದ ಕಿರಾತ ಅರ್ಜುನರ ಕಾಳಗ ಬಯಲಾಟ ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಗ್ರಾಮೀಣ ಪ್ರದೇಶದ ಕಲೆಗಳನ್ನು ಇಂದಿನ ಯುವ ಪೀಳಿಗೆಗೆ ಕಲಿಸುವತ್ತ ಕಲಾವಿದರು ಗಮನ ಹರಿಸಬೇಕು. ಹಿಂದಿನ ದಿನಗಳಲ್ಲಿ ದೊಡ್ಡಾಟ ಮತ್ತು ನಾಟಕಗಳನ್ನು ಪ್ರದರ್ಶಿಸುವುದು ಸಂಪ್ರದಾಯವನ್ನಾಗಿಸಿಕೊಳ್ಳಲಾಗಿತ್ತು. ಆ ಮೂಲಕ ತಮ್ಮ ಕಲೆ, ಸಂಸ್ಕೃತಿ ಮತ್ತು ಪರಂಪರೆಯನ್ನು ಮೆರೆಯುತ್ತಿದ್ದರು. ಜತೆಗೆ ಐತಿಹಾಸಿಕ ದಿನಗಳನ್ನು ಮೆಲುಕು ಹಾಕುತ್ತಿದ್ದರು. ಆದರೆ ಇಂದಿನ ಯುವ ಪೀಳಿಗೆ ಪಾಶ್ಚಿಮಾತ್ಯ ಸಂಸ್ಕೃತಿಗೆ ಮಾರು ಹೋಗಿದ್ದು, ಎಲ್ಲ ಪರಂಪರೆಗಳಿಗೂ ಧಕ್ಕೆ ಬರುತ್ತಿದೆ. ಆದ್ದರಿಂದ ಗ್ರಾಮೀಣ ಪ್ರದೇಶದಲ್ಲಿ ನಡೆಯುವ ಇಂತಹ ಕಲೆಗಳನ್ನು ಸರಕಾರ ಪ್ರೋತ್ಸಾಹಿಸುತ್ತಿದೆ ಎಂದರು.



ಮುಖ್ಯ ಅತಿಥಿಯಾಗಿ ಪಾಲ್ಗೊಂಡು ಮಾತನಾಡಿದ ಅನಿಲಕುಮಾರ ಹೊಸಮನಿ, ಉತ್ತರ ಕರ್ನಾಟಕದ ಗಂಡು ಕಲೆಯಾದ ಜಾನಪದ ಬಯಲಾಟಗಳು ಈ ಹಿಂದೆ ಜಾತ್ರೆ, ಉತ್ಸವ ಸಂದರ್ಭಗಳಲ್ಲಿ ಪ್ರತಿ ಗ್ರಾಮಗಳಲ್ಲಿ ವರ್ಷದಲ್ಲಿ ಎರಡು–ಮೂರು ಬಾರಿ ನಡೆದು ಗ್ರಾಮೀಣ ಭಾಗದ ಕಲಾವಿದರಿಗೆ ಪ್ರೋತ್ಸಾಹ, ಮನರಂಜನೆ ದೊರೆಯುತ್ತಿತ್ತು. ಆದರೆ, ಇತ್ತೀಚೆಗೆ ಮೊಬೈಲ್, ಸಿನಿಮಾ ಮತ್ತು ಟಿ.ವಿ ಹಾವಳಿಯಿಂದ ಜೀವಂತ ಕಲೆಯಾದ ನಾಟಕ ಮತ್ತು ಬಯಲಾಟಗಳು ಅಪರೂಪವಾಗುತ್ತಿವೆ. ಗ್ರಾಮೀಣ ಭಾಗದ ಹಿರಿಯ ಕಲಾವಿದರು ಅಮೂಲ್ಯ ಕಲೆ ನಶಿಸಿ ಹೋಗದಂತೆ ಮುಂದಿನ ಜನಾಂಗಕ್ಕೆ ತರಬೇತಿ ನೀಡುವ ಮೂಲಕ ಜೀವಂತವಾಗಿ ಇಡಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ಗ್ರಾ.ಪಂ ಮಾಜಿ ಅಧ್ಯಕ್ಷ ಎಂ.ಎಂ. ಮೇಟಿ ಮಾತನಾಡಿ, ಪ್ರಾಚೀನ ಕಾಲದ ಕಲೆ, ಸಂಸ್ಕೃತಿಯನ್ನು ಬಿತ್ತರಿಸುವ ಇಂತಹ ಬಯಲಾಟದ ಕಲೆಯನ್ನು ಪ್ರದರ್ಶಿಸುವ ಮೂಲಕ ನಮ್ಮ ಸಂಸ್ಕೃತಿಯನ್ನು ಇಂದಿನ ನವಪೀಳಿಗೆಗೆ ಪರಿಚಯಿಸುವ ಕಾರ್ಯಕ್ಕೆ ಯಶಸ್ಸು ಲಭಿಸಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಹಲವು ಗಣ್ಯರನ್ನು, ಕಲಾವಿದರನ್ನು ಸನ್ಮಾನಿಸಲಾಯಿತು. ಮುಖ್ಯ ಅತಿಥಿಗಳಾಗಿ ರವೀಂದ್ರನಾಥ ದೊಡ್ಡಮೇಟಿ, ಅಶೋಕಪ್ಪ ಯಾವಗಲ್ಲ, ಶೇಖಣ್ಣವರ ಮೇಟಿ, ಡಾ. ಎ.ವಿ. ನರೇಗಲ್ಲ, ಗುರುಲಿಂಗಯ್ಯ ಮಂಟಯ್ಯನಮಠ, ಸುಭಾಷಚಂದ್ರ ಪಲ್ಲೇದ ಮಹೇಶ್ವರಪ್ಪ ಕೋರಿ, ರಮೇಶ ಪಲ್ಲೇದ, ಶರಣಪ್ಪಮಾಸ್ತಾರ ಬೂದಿಹಾಳ, ಅಡಿವೆಪ್ಪ ರೋಣದ, ಬಸವರಾಜ ಶ್ಯಾಶೆಟ್ಟಿ, ಫಕೀರಪ್ಪ ಮಾದರ ಮುಂತಾದವರು ಭಾಗವಹಿಸಿದ್ದರು.

### ಶ್ರೀ ಗಂಜೀ ಬಸವೇಶ್ವರ ದೇವರ 63ನೇ ಜಾತ್ರಾ ಮಹೋತ್ಸವ

# ಜಾತ್ರಾ ಕಮಿಟಿಗೆ ಪದಾಧಿಕಾರಿಗಳ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶ್ರೀ ಗಂಜಿಬಸವೇಶ್ವರ ದೇವರ 63ನೇ ವರ್ಷದ ಜಾತ್ರಾ ಮಹೋತ್ಸವದ ಅಂಗವಾಗಿ ಶ್ರೀಗಂಜೀ ಬಸವೇಶ್ವರ ದೇವಸ್ಥಾನದಲ್ಲಿ ನಡೆದ ಸಭೆಯಲ್ಲಿ ಸಭಾಧ್ಯಕ್ಷರನ್ನಾಗಿ ಕರಬಸಯ್ಯ ಬಸಯ್ಯ ನಾಲ್ವತ್ತ್ವಾಡಮಠ ಇವರನ್ನು ಆಯ್ಕೆ ಮಾಡಲಾಯಿತು.

ಕಳೆದ ವರ್ಷದ 2024ರ ಲೆಕ್ಕ ತಪಾಸಣೆಯ ಜೊತೆ–ಗೆ ಜಾತ್ರಾ ಮಹೋತ್ಸವದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು. ಅಧ್ಯಕ್ಷರಾಗಿ ಪ್ರಶಾಂತ ಶಂಕ್ರಯ್ಯ ಶಾಬಾದಿಮಠ, ಉಪಾಧ್ಯಕ್ಷರಾಗಿ ಸೋಮಣ್ಣ ಕೊಟ್ರಪ್ಪ ಮರದ, ಕೋಶಾಧ್ಯಕ್ಷರಾಗಿ ಶಂಕರ ಅಂದಾನಪ್ಪ ಕರಭಿಷ್ಟಿ, ಕಾ ಂ ರ್ ರ್ ದ ರ್ಶಿ ಂ ರ್ ರಾ ಗಿ ಸಿದ್ಧಲಿಂಗೇಶ ಬಸಪ್ಪ ಸಂಗನಾಳ, ಸಹಕಾರ್ಯದರ್ಶಿಯನ್ನಾಗಿ ಪ್ರಶಾಂತ ಮಲ್ಲೇಶಪ್ಪ ಮುದೇಗೊಣ್ಣನವರ ಇವರನ್ನು ಆಯ್ಕೆ ಮಾಡಿ ಸಭೆಯಲ್ಲಿ ತೀರ್ಮಾನಿಸಲಾಯಿತು.

ಸಭೆಯಲ್ಲಿ ಓಣಿಯ ಹಿರಿಯರಾದ ನಿಂಗಪ್ಪ ಪಡಗದ, ಜಿ.ಎಲ್. ಮರಿಗೌಡ್ರ, ರುದ್ರಪ್ಪ ಕಲಬಂಡಿ, ಫಕ್ಕೀರಗೌಡ ಮರಿಗೌಡ್ರ, ಈರಣ್ಣ ಕರಭಿಷ್ಟಿ, ರಮೇಶ ಕುರ್ತಕೋಟಿ, ಬಸಯ್ಯ ಹಿರೇಮಠ, ಬಸಪ್ಪ ಪಡಗದ, ಕುಮಾರ ವಿಭೂತಿಮಠ, ಮಂಜುನಾಥ ಲಕ್ಕುಂಡಿ, ಸಿದ್ದಪ್ಪ ಹೊಂಬಾಳಿ, ಸಿದ್ರಾಮಪ್ಪ ಹುಂಬಿ, ಹನಮಂತ ಗಿಡ್ಡಹನಮಣ್ಣವರ, ರಾಜು ಖೋಡೆ, ನಾಗಪ್ಪ ಗುಗ್ಗರಿ, ಬಸವನಗೌಡ ಉಮಚಗಿ, ಅಂದಯ್ಯ ವಿಭೂತಿಮಠ, ಹನಮಂತ ಗಿಡ್ಡಹನಮಣ್ಣವರ, ಹುಚ್ಚಪ್ಪ ಐಹೊಳಿ, ಸುನೀಲ ಕೊತಬಾಳ, ಪ್ರಶಾಂತ ಮುದೇಗೊಣ್ಣವರ, ಬಸವರಾಜ ನಾಯ್ಕರ, ಸಂಗಪ್ಪ ಸಂಗನಾಳ, ಶಶಿ ಅಗಸಿಬಾಗಿಲು, ಶಿವಪ್ಪ ಹಳ್ಳಿಕೇರಿ, ಶರಣಪ್ಪ ನಾಗೂರ, ರಾಚಪ್ಪ ಲಕ್ಕುಂಡಿ, ಕುಮಾರ ಖೋಡೆ, ವೀರೇಶ ಸಾಲಿಮಠ, ಪುಟ್ಟರಾಜ ಮಣಕವಾಡ, ಗಣೇಶ ಲಕ್ಕುಂಡಿ, ನಾಗಪ್ಪ ಹುಂಬಿ, ಬಸವರಾಜ ತೋಟದ, ಮುದಕಪ್ಪ ಕಬನೂರ, ಎಸ್.ಸಿ. ಬಳಗಾನೂರಮಠ, ರಾಮಣ್ಣ ಜಡಿ ಮುಂತಾದವರಿದ್ದರು.

ಜಾತ್ರಾ ಮಹೋತ್ಸವದ ಸಲಹಾ ಸಮಿತಿಗೆ ಪರಪ್ಪ ಫಕ್ಕೀರಪ್ಪ ಕಮತರ, ಸೋಮು ಮುಳಗುಂದ, ಪ್ರಶಾಂತ ನರೇಗಲ್ಲ, ಸತೀಶ ಗಿಡ್ಡಹನಮಣ್ಣವರ, ಶಿವಪ್ಪ ಮುಳ್ಳಾಳ, ವೀರಣ್ಣ ಗಡಗಿ, ಸಿದ್ದು ಗಾಣಿಗೇರ, ಸಿದ್ದು ಉಮಚಗಿ, ಪ್ರಭು ಕಲಬಂಡಿ, ಶಂಕರ ಕರಭಿಷ್ಟಿ, ಶಿವಾನಂದ ಹೂಗಾರ, ಮಲ್ಲಪ್ಪ ಉಮಚಗಿ, ಬಸವರಾಜ ನಾಯ್ಕರ, ಸಿದ್ದಲಿಂಗೇಶ ಸಂಗನಾಳ, ಶರಣಪ್ಪ ತಾಂಬೆ, ಮಲ್ಲಪ್ಪ ಕರಭಿಷ್ಟಿ, ಮಂಜುನಾಥ ಲಕ್ಷೆಟ್ಟಿ, ಬಸವರಾಜ ಕಬನೂರ, ಬಸಪ್ಪ ಪಡಗದ ಆಯ್ಕೆಯಾದರು..

# 'ಯುದ್ಧ ನಿಲ್ಲಿಸಿ': ಹಮಾಸ್ ವಿರುದ್ಧವೇ ಪ್ರತಿಭಟನೆಗಿಳಿದ ಗಾಝಾ ಜನತೆ

■ವಿಜಯಸಾಕ್ಷಿ ಸುದ್ದಿ, ಟೆಲ್ ಅವಿವ್

ಪ್ರತಿನಿತ್ಯ ಸಾವು–ನೋವುಗಳನ್ನು ನೋಡುತ್ತಾ ಕುಗ್ಗಿ ಹೋಗಿರುವ ಗಾಝಾದ ಜನತೆ ಹಮಾಸ್ ಗುಂಪಿನ ವಿರುದ್ಧವೇ ತಿರುಗಿ ಬಿದ್ದಿದ್ದು, ಇಸ್ರೇಲ್ ಜೊತೆಗಿನ ಯುದ್ಧ ನಿಲ್ಲಿಸುವಂತೆ ಆಗ್ರಹಿಸಿ ಪ್ರತಿಭಟಿಸಿದ್ದಾರೆ ಎಂದು ವರದಿಯಾಗಿದೆ.

ಕದನ ವಿರಾಮ ಒಪ್ಪಂದ ಮುರಿದುಬಿದ್ದ ಕಾರಣ ಇಸ್ರೇಲ್ ಮತ್ತೆ ಆಕ್ರಮಣ ನಡೆಸುತ್ತಿದೆ. ಪ್ರತಿನಿತ್ಯ ನೂರಾರು ಜನರು ಸಾಯುತ್ತಿದ್ದಾರೆ. ಇಸ್ರೇಲ್‌ಗೆ ಏನೂ ಮಾಡಲು ನಮಗೆ ಸಾಧ್ಯವಾಗುತ್ತಿಲ್ಲ. ಹಾಗಾಗಿ , ಹಮಾಸ್ ಮೇಲೆ ಒತ್ತಡ ಹೇರಲು ಪ್ರತಿಭಟಿಸಿರುವುದಾಗಿ ಉತ್ತರ ಗಾಝಾದ ಜನತೆ ಹೇಳಿದ್ದಾರೆ ಎಂದು ವರದಿಗಳು ತಿಳಿಸಿವೆ.

ಪ್ರಮುಖ ಜನವಸತಿ ಪ್ರದೇಶವಾಗಿದ್ದ ಉತ್ತರ ಗಾಝಾ ಇಸ್ರೇಲ್‌ನ ನಿರಂತರ ದಾಳಿಯಿಂದ ಬರೀ ಕಟ್ಟಡ ಅವಶೇಷಗಳ ರಾಶಿಯಾಗಿ ಪರಿವರ್ತನೆಗೊಂಡಿದೆ. ಇಲ್ಲಿನ ಕಂದಮ್ಮಗಳು ಸೇರಿದಂತೆ ಸಾವಿರಾರು ಜನರನ್ನು ಇಸ್ರೇಲ್ ಹತ್ಯೆ ನಡೆಸಿದೆ. ಕಟ್ಟಡಗಳನ್ನು ಧ್ವಂಸ ಮಾಡಿದೆ. ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಹಾಳುಗೆಡವಿದೆ. ಸಾವಿರಾರು ಜನರು ತಮ್ಮದೆಲ್ಲವನ್ನು ಬಿಟ್ಟು ಬೇರೆಡೆಗೆ ಪಲಾಯನ ಮಾಡಿದ್ದಾರೆ.

ಕಳೆದ ಮಂಗಳವಾರ ಉತ್ತರ ಗಾಝಾದ ಬೈತ್ ಲಾಹಿಯಾದ ಬೀದಿಗಳಲ್ಲಿ ಜಮಾಯಿಸಿದ ನೂರಾರು ಜನರು "ದೇವರ ದಯೆಯಿಂದ ಹಮಾಸ್ ತೊಲಗಲಿ, ಹಮಾಸ್‌ನವರು ಭಯೋತ್ಪಾದಕರು, ನಾವು ಯುದ್ಧವನ್ನು ಕೊನೆಗೊಳಿಸಲು ಬಯಸುತ್ತೇವೆ" ಎಂಬ ಘೋಷಣೆಗಳನ್ನು ಕೂಗಿ ನೋವು ಹೊರಹಾಕಿದ್ದಾರೆ. ಬುಧವಾರ ಮತ್ತು ಗುರುವಾರ ಕೂಡ ಪ್ರತಿಭಟನೆ ಮುಂದುವರಿದಿದೆ ಎಂದು ವರದಿಯಾಗಿದೆ.

"ಜನರು ನಿರಂತರ ಆಕ್ರಮಣದಿಂದ ಬಸವಳಿದು ಹೋಗಿದ್ದಾರೆ. ಅವರಿಗೆ ಇನ್ನು ಹೋಗಲು ಜಾಗವಿಲ್ಲ. ಹಾಗಾಗಿ, ಯುದ್ಧ ನಿಲ್ಲಿಸಿ ಎಂದು ಸ್ವಯಂ ಪ್ರೇರಿತರಾಗಿ ಬೀದಿಗಿಳಿದು ಪ್ರತಿಭಟಿಸಿದ್ದಾರೆ" ಎಂದು ಪ್ರತ್ಯಕ್ಷದರ್ಶಿಯೊಬ್ಬರನ್ನು ಉಲ್ಲೇಖಿಸಿ ರಾಯಿಟರ್ಸ್ ವರದಿ ಮಾಡಿದೆ.

ಬುಧವಾರ ಗಾಝಾದಲ್ಲಿ ಕನಿಷ್ಠ 9 ಪ್ರತಿಭಟನಾ ಮೆರವಣಿಗೆಗಳು ನಡೆದಿವೆ. " ನಮ್ಮ ರಕ್ತವನ್ನು ಮಾರಿದ ಎಲ್ಲರಿಗೂ ನಮ್ಮ ಧ್ವನಿ ತಲುಪಲಿ" ಎಂಬ ಘೋಷಣೆಗಳನ್ನು ಕೂಗುತ್ತಾ ಜನರು ಆಕ್ರೋಶ ವ್ಯಕ್ತಪಡಿಸಿದ್ದಾರೆ ಎಂದು ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳು ತಿಳಿಸಿವೆ.


# ಮ್ಯಾನ್ಮಾರ್, ಬ್ಯಾಂಕಾಕ್‌ನಲ್ಲಿ ಪ್ರಬಲ ಭೂಕಂಪ: ಬೃಹತ್ ಕಟ್ಟಡ ಕುಸಿತ, 43 ಕಾರ್ಮಿಕರು ಸಿಲುಕಿರುವ ಶಂಕೆ

■ವಿಜಯಸಾಕ್ಷಿ ಸುದ್ದಿ, ಬ್ಯಾಂಕಾಕ್

ಬ್ಯಾಂಕಾಕ್‌ನಲ್ಲಿ ಶುಕ್ರವಾರ (ಮಾ.28) ಸಂಭವಿಸಿದ ಪ್ರಬಲ ಭೂಕಂಪದಿಂದ ಸರ್ಕಾರಿ ಕಚೇರಿಗಳಿಗಾಗಿ ನಿರ್ಮಾಣ ಹಂತದಲ್ಲಿದ್ದ 30 ಅಂತಸ್ತಿನ ಗಗನಚುಂಬಿ ಕಟ್ಟಡ ಕುಸಿದು 43 ಕಾರ್ಮಿಕರು ಅವಶೇಷಗಳಡಿ ಸಿಲುಕಿಕೊಂಡಿದ್ದಾರೆ ಎಂದು ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್ ವರದಿ ಮಾಡಿದೆ. ಮ್ಯಾನ್ಮಾರ್‌ನಲ್ಲಿ ಕೇಂದ್ರಿತವಾಗಿರುವ 7.7 ತೀವ್ರತೆಯ ಪ್ರಬಲ ಭೂಕಂಪದ ನಂತರ ಥಾಯ್ ರಾಜಧಾನಿಯ ಉತ್ತರದಲ್ಲಿದ್ದ ಕಟ್ಟಡ ಕೆಲವೇ ಸೆಕೆಂಡುಗಳಲ್ಲಿ ಧರಾಶಾಹಿಯಾಗಿದೆ.

ಶುಕ್ರವಾರ ಮಧ್ಯಾಹ್ನ ಮ್ಯಾನ್ಮಾರ್‌ನ ಸಾಗೈಂಗ್ ನಗರದ ವಾಯುವ್ಯ ಪ್ರದೇಶದಲ್ಲಿ ಕೇಂದ್ರಿತವಾಗಿ 7.7 ತೀವ್ರತೆಯ ಭೂಕಂಪ ಸಂಭವಿಸಿದೆ ಎಂದು ಯುನೈಟೆಡ್ ಸ್ಟೇಟ್ಸ್ ಭೂವೈಜ್ಞಾನಿಕ ಸಮೀಕ್ಷೆ ತಿಳಿಸಿದೆ.

## ಹೊಂಡ ತುಳುಕಿಸುವ ಕಾರ್ಯಕಮ ನಾಳೆ




■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಯುಗಾದಿ ಪ್ರಯುಕ್ತ ಇಲ್ಲಿಯ ಅತ್ತಿಮಬ್ಬೆ ಮಹಾದ್ವಾರದ ಹತ್ತಿರವಿರುವ ಮಾರುತಿ ದೇವರ ಬಣ್ಣದ ಹೊಂಡ ತುಳುಕಿಸುವ ಕಾರ್ಯಕ್ರಮ ಮಾರ್ಚ್ 30ರಂದು ನಡೆಯಲಿದೆ.

ಸಂಜೆ 5ಕ್ಕೆ ಧಾರ್ಮಿಕ ವಿಧಿ-ವಿಧಾನಗಳೊಂದಿಗೆ ಪೂಜೆ ಸಲ್ಲಿಸಿದ ನಂತರ ಹೊಂಡ ತುಳುಕಿಸುವ ಕಾರ್ಯಕ್ರಮ ನಡೆಯಲಿದೆ. ಇದಕ್ಕೂ ಪೂರ್ವ ಬೆಳಿಗ್ಗೆ ಮಾರುತಿ ದೇವರಿಗೆ ವಿವಿಧ ಹೂವುಗಳ ಅಲಂಕಾರದೊಂದಿಗೆ ಅಭಿಷೇಕ ಹಾಗೂ ವಿಶೇಷ ಪೂಜಾ ಕೈಂಕರ್ಯಗಳು ಜರುಗುವವು. ನಂತರ ಗ್ರಾಮದ ವಿವಿಧ ದೇವಸ್ಥಾನಗಳಿಗೆ ತೆರಳಿ ಉಡಿ ತುಂಬುವ ಕಾರ್ಯಕ್ರಮಗಳು ನಡೆಯಲಿವೆ ಎಂದು ಪ್ರಕಟಣೆ ತಿಳಿಸಿದೆ.

## ಜವಾಹರ ನವೋದಯ ಶಾಲೆಗೆ ಆಯ್ಕೆ



■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ತಾಲೂಕಿನ ರಾಜೂರಿನ ಶ್ರೀ ಬಸವೇಶ್ವರ ಕಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿ ಕು. ಮುದಸ್ಸರ್ ಮದೀನ್ ಬಾಗವಾನ 2024–25ನೇ ಸಾಲಿನ ಜವಾಹರ ನವೋದಯ ವಿದ್ಯಾಲಯದ ಪ್ರವೇಶ ಪರೀಕ್ಷೆಯಲ್ಲಿ ಉತ್ತಮ ಅಂಕಗಳೊಂದಿಗೆ ಉನ್ನತ ಶ್ರೇಣಿ ಪಡೆದು ಜವಾಹರ ನವೋದಯ ವಿದ್ಯಾಲಯಕ್ಕೆ ಆಯ್ಕೆಯಾಗಿ ಶಾಲೆಗೆ ಕೀರ್ತಿ ತಂದಿದ್ದಾನೆ.

ನವೋದಯ ಶಾಲೆಗೆ ಆಯ್ಕೆಯಾದ ಕು. ಮುದಸ್ಸರ್ ಮದೀನ್ ಬಾಗವಾನಗೆ ಶಾಲಾ ವತಿಯಿಂದ ಸನ್ಮಾನಿಸಿ ಅಭಿನಂದಿಸಲಾಯಿತು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯೋಪಾಧ್ಯಾಯರಾದ ಕೆ. ಬಿ. ಬೆನಕನವಾರಿ, ಶಿಕ್ಷಕಿಯರಾದ ಶ್ರೀಮತಿ ಜಿ. ಜಿ. ವ್ಯಾಪಾರಿ, ಶ್ರೀಮತಿ ವೀಣಾ ಮಳಗಿ, ವಿದ್ಯಾರ್ಥಿಯ ಪಾಲಕರಾದ ಮೆಹಬೂಬಸಾಬ ಬಾಗವಾನ, ಶ್ರೀಮತಿ ಬಿಬಿಜಾನ ಬಾಗವಾನ, ಸಿಬ್ಬಂದಿ ವರ್ಗ ಹಾಗೂ ವಿದ್ಯಾರ್ಥಿಗಳು ಇದ್ದರು.

## ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಐಐಎಸ್‌ಸಿ, ಐಐಟಿ ಮತ್ತು ಎನ್‌ಐಟಿ ಸಂಸ್ಥೆಗಳ ಮೂಲಕ ಆರ್ಟಿಫಿಷಿಯಲ್ ಇಂಟಲಿಜೆನ್ಸ್ ಮತ್ತು ಮಶಿನ್ ಲರ್ನಿಂಗ್ ವೃತ್ತಿಪರ ತರಬೇತಿ ಕೋರ್ಸ್‌ಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ವೃತ್ತಿಪರ ಇಂಜಿನಿಯರಿಂಗ್ ಪದವೀಧರರಿಗೆ 15 ಸಾವಿರ ರೂಗಳ ಶಿಷ್ಯವೇತನ ತರಬೇತಿ ನೀಡುವ ಸಂಬಂಧ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನ ಎಪ್ರಿಲ್ 11 ಆಗಿದ್ದು, ನಿಗದಿತ ಅರ್ಜಿ ನಮೂನೆಯನ್ನು ಉಪನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಗದಗ ಇವರ ಕಚೇರಿಯಲ್ಲಿ ಪಡೆದು ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಗದಗ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಚೇರಿಯನ್ನು ಸಂಪರ್ಕಿಸಬಹುದಾಗಿದೆ.

### ಶಾಸಕ ಡಾ. ಚಂದ್ರು ಲಮಾಣಿ ಉಪಸ್ಥಿತಿಯಲ್ಲಿ ಲಕ್ಷ್ಮೇಶ್ವರ ಪುರಸಭೆಯ ಬಜೆಟ್ ಮಂಡನೆ

# ಅಭಿವೃದ್ಧಿಯ ವಿಷಯದಲ್ಲಿ ರಾಜಕೀಯ ಬೇಡ



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಪುರಸಭೆಯಲ್ಲಿ ಶುಕ್ರವಾರ ನಡೆದ ವಿಶೇಷ ಸಾಮಾನ್ಯ ಸಭೆ ಹಾಗೂ 2025–26ನೇ ಸಾಲಿನ ಬಜೆಟ್ ಮಂಡನೆಯ ಸಭೆಯಲ್ಲಿ ಪುರಸಭೆ ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ ಬಜೆಟ್ ಮಂಡಿಸಿದರು. ಈ ಬಾರಿ ಸುಮಾರು 24 ಕೋಟಿ 45 ಲಕ್ಷಕ್ಕೂ ಅಧಿಕ ಗಾತ್ರದ ಬಜೆಟ್ ಮಂಡಿಸಲಾಗಿದ್ದು, ಒಟ್ಟು 1 ಕೋಟಿ 18 ಲಕ್ಷ 15 ಸಾವಿರ ರೂಗಳ ಉಳಿತಾಯ ಬಜೆಟ್‌ನ್ನು ಮಂಡಿಸಲಾಯಿತು.

ಶುಕ್ರವಾರ ನಡೆದ ಈ ಸಭೆಗೆ ಶಾಸಕ ಡಾ. ಚಂದ್ರು ಲಮಾಣಿ ಆಗಮಿಸಿದ್ದರು. ಅಧ್ಯಕ್ಷೆ ಯಲ್ಲಮ್ಮ ದುರಗಣ್ಣವರ ಹಾಗೂ ಉಪಾಧ್ಯಕ್ಷ ಪೀರದೋಷ ಆಡೂರ ಹಾಗೂ ಸರ್ವ ಸದಸ್ಯರು, ಮುಖ್ಯಾಧಿಕಾರಿ ಮಹೇಶ ಹಡಪದ ಬಜೆಟ್ ಪ್ರತಿಗಳನ್ನು ಶಾಸಕರೊಂದಿಗೆ ಪ್ರದರ್ಶಿಸಿ ಬಜೆಟ್ ಮಂಡನೆಗೆ ತೆರಳಿದರು.

ಅಧ್ಯಕ್ಷರ ಅನುಮತಿ ಮೇರೆಗೆ ಸಭೆಯಲ್ಲಿ ಬಜೆಟ್ ಪ್ರಸ್ತುತಪಡಿಸಿದ ಮುಖ್ಯಾಧಿಕಾರಿ ಮಹೇಶ ಹಡಪದ, ಒಟ್ಟು 23 ಕೋಟಿ 27 ಲಕ್ಷ 62 ಸಾವಿರ ಪಾವತಿಗಳನ್ನು ಅಂದಾಜಿಸಲಾಗಿದ್ದು, ಈ ಬಾರಿಯ ನಮ್ಮ ಬಜೆಟ್ ಗಾತ್ರ 24 ಕೋಟಿ 45 ಲಕ್ಷಕ್ಕೂ ಅಧಿಕವಾಗಿದೆ. ಇದರಲ್ಲಿ 23 ಕೋಟಿ 27 ಲಕ್ಷ 62 ಸಾವಿರ ಕಳೆದು 1 ಕೋಟಿ, 18 ಲಕ್ಷ 15 ಸಾವಿರ ಉಳಿತಾಯವನ್ನು ನಿರೀಕ್ಷಿಸಲಾಗಿದೆ ಎಂದು ಘೋಷಿಸಿದರು. 2025–26ನೇ ಸಾಲಿಗೆ ಆದಾಯವನ್ನು ಪುರಸಭೆ ನಿಧಿಯಿಂದ ಒಟ್ಟು 4 ಕೋಟಿ 2 ಲಕ್ಷ 2 ಸಾವಿರ ರೂಗಳನ್ನು ಅಂದಾಜಿಸಲಾಗಿದ್ದು, ಎಸ್‌ಎಫ್‌ಸಿ ಮುಕ್ತ ನಿಧಿ 15ನೇ ಹಣಕಾಸು ಮತ್ತು ಇತರೆ ಅನುದಾನದ ಮೂಲದಿಂದ 8 ಕೋಟಿ 49 ಲಕ್ಷ 51 ಸಾವಿರ ರೂಗಳನ್ನು ನಿರೀಕ್ಷಿಸಲಾಗಿದೆ.

ಪುರಸಭೆ ನಿಧಿಯಿಂದ ಅವಶ್ಯಕ ಖರ್ಚುಗಳಿಗೆ ಒಟ್ಟು 4 ಕೋಟಿ 1 ಲಕ್ಷ 20 ಸಾವಿರ ರೂಗಳ ಹಣವನ್ನು ಮೀಸಲಾಗಿಡಲಾಗಿದೆ. ಅನುದಾನದಿಂದ ಬಂದ ಮೊತ್ತದಲ್ಲಿ 12.35 ಕೋಟಿಗೂ ಅಧಿಕ ಹಣವನ್ನು ಕೆರೆ ಅಭಿವೃದ್ಧಿ, ಮಳಿಗೆ ನಿರ್ಮಾಣಗಳಿಗೆ ಮೀಸಲಿಡಲಾಗಿದ್ದು, ಸರಕಾರಕ್ಕೆ ಕಟ್ಟಬೇಕಾದ ಉಪಕರ ಮತ್ತು ತೆರಿಗೆ ಇತ್ಯಾದಿಗಳಿಗಾಗಿ 2.86 ಕೋಟಿಗೂ ಅಧಿಕ ಹಣವನ್ನು ಮೀಸಲಿಡಲಾಗಿದೆ.

ಪ.ಜಾ, ಪ.ಪಂ ಕಲ್ಯಾಣ ಕಾರ್ಯಕ್ರಮಗಳಿಗೆ ಪುರಸಭೆ ನಿಧಿಯಿಂದ 3.30 ಲಕ್ಷ, ರಾಜ್ಯ ಹಣಕಾಸು ನಿಧಿಯಿಂದ 1.76 ಲಕ್ಷ, ಅಂಗವಿಕರಲ ಕಲ್ಯಾಣ ಕಾರ್ಯಕ್ರಮಗಳಿಗಾಗಿ ಪುರಸಭೆ ನಿಧಿಯಿಂದ 68 ಸಾವಿರ, ರಾಜ್ಯ ಹಣಕಾಸು ನಿಧಿಯಿಂದ 1.21 ಲಕ್ಷ ರೂಗಳನ್ನು ಮೀಸಲಿಡಲಾಗಿದೆ ಎಂದು ಹೇಳಿದರು.


> ಪಟ್ಟಣದ ಅಭಿವೃದ್ಧಿ ವಿಷಯದಲ್ಲಿ ಪುರಸಭೆ ಸದಸ್ಯರ ಜವಾಬ್ದಾರಿ ಹೆಚ್ಚಾಗಿದ್ದು, ನಗರೋತ್ಥಾನ ಕಾಮಗಾರಿಗಳನ್ನು ಆದಷ್ಟು ಶೀಘ್ರ ಮುಗಿಸಬೇಕು. ಬೇಸಿಗೆ ಕಾಲದಲ್ಲಿ ಪಟ್ಟಣದ ಸಾರ್ವಜನಿಕರಿಗೆ ಕುಡಿಯುವ ನೀರಿನ ತೊಂದರೆಯಾಗದಂತೆ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕು. ಅಭಿವೃದ್ಧಿಯ ವಿಷಯದಲ್ಲಿ ರಾಜಕೀಯ ಮಾಡುವದು ಬೇಡ. ಪಕ್ಷಾತೀತವಾಗಿ ಕೆಲಸ ಮಾಡೋಣ. ಊರಿನ ಅಭಿವೃದ್ಧಿಗೆ ಎಲ್ಲರೂ ಕೂಡಿ ಕೆಲಸ ಮಾಡೋಣ.
>
> – ಡಾ.ಚಂದ್ರು ಲಮಾಣಿ.
> ಶಾಸಕರು, ಶಿರಹಟ್ಟಿ.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಸರಕಾರದಿಂದ ದೊರೆಯುವ ವಿಶೇಷ ಅನುದಾನವನ್ನು ತರಲು ಪ್ರಾಮಾಣಿಕವಾಗಿ ಪ್ರಯತ್ನಿಸುತ್ತೇನೆ. ಕುಡಿಯುವ ನೀರು ಪೂರೈಕೆಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು.

ಉಪಾಧ್ಯಕ್ಷ ಪೀರದೋಷ ಆಡೂರ, ಹಿರಿಯ ಸದಸ್ಯರಾದ ರಾಜಣ್ಣ ಕುಂಬಿ, ಮಹೇಶ ಹೊಗೆಸೊಪ್ಪಿನ್, ಅಶ್ವಿನಿ ಅಂಕಲಕೋಟಿ, ಪ್ರವೀಣ ಬಾಳಿಕಾಯಿ, ಜಯಕ್ಕ ಅಂದಲಗಿ, ಯಕ್ಕ ಕಳ್ಳಿ, ಎಸ್.ಕೆ. ಹವಾಲ್ದಾರ, ವಿಜಯ ಕರಡಿ, ರಾಮಪ್ಪ ಗಡದವರ, ನೀಲಪ್ಪ ಪೂಜಾರ, ಕಿರಣ ನವಲೆ ಬಜೆಟ್ ಮೇಲಿನ ಚರ್ಚೆಯಲ್ಲಿ ಪಾಲ್ಗೊಂಡು ಸಲಹೆ ಸೂಚನೆಗಳನ್ನು ನೀಡಿದರು. ಪುರಸಭೆ ಮುಖ್ಯಾಧಿಕಾರಿ ಮಹೇಶ ಹಡಪದ, ಸಮುದಾಯ ಸಂಘಟನಾ ಅಧಿಕಾರಿ ಶೋಭಾ ಬೆಳ್ಳಿಕೊಪ್ಪ, ವ್ಯವಸ್ಥಾಪಕಿ ಮಂಜುಳಾ ಹೂಗಾರ, ಮಂಜುನಾಥ ಮುದಗಲ್, ಹನುಮಂತ ನಂದೆಣ್ಣವರ ಸೇರಿದಂತೆ ಪುರಸಭೆ ಸರ್ವ ಸದಸ್ಯರು ಹಾಜರಿದ್ದರು.

### ಶಿವಾನುಭವ ಕಾರ್ಯಕ್ರಮದಲ್ಲಿ ಡಾ. ತೋಂಟದ ಸಿದ್ಧರಾಮ ಸ್ವಾಮೀಜಿ ಅಭಿಮತ

# ನೀರಿನ ಮಿತವ್ಯಯ ಅವಶ್ಯಕ



■ವಿಜಯಸಾಕ್ಷಿ ಸುದ್ದಿ, ಗದಗ

ಪರಿಸರ ಜನಜೀವನದ ಮೇಲೆ ಅಗಾಧವಾದ ಪರಿಣಾಮ ಬೀರುತ್ತದೆ. ಪರಿಸರ ಕಲುಷಿತಗೊಂಡರೆ, ಮನುಷ್ಯನ ಮನುಸ್ಸು ಕಲುಷಿತವಾಗುವುದು. ಮನುಷ್ಯ ಪರಿಸರದ ಶಿಶು ಎಂದು ಡಾ. ತೋಂಟದ ಸಿದ್ದರಾಮ ಮಹಾಸ್ವಾಮೀಜಿ ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2738ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ನೀರು ಜೀವಜಲ, ಜೀವನಾಧಾರ. ಪ್ರಸ್ತುತ ನೀರು ಮಲಿನವಾಗುತ್ತಿದೆ. ಮಲಿನವಾದ ನೀರು ಹೊಳೆ–ಹಳ್ಳಗಳಿಗೆ ಸೇರುತ್ತಿದೆ. ಇದಕ್ಕೆಲ್ಲಾ ಕಾರ್ಖಾನೆಗಳು ಕಾರಣ. ಉದ್ದಿಮೆದಾರರು ಮಲಿನವಾದ ನೀರನ್ನು ಸಂಸ್ಕರಿಸಿ ನದಿಗಳಿಗೆ ಬಿಡಬೇಕು. ಆದರೆ ಅದು ಆಗುತ್ತಿಲ್ಲ. ನೀರಿನ ಮಿತವ್ಯಯ ಅವಶ್ಯವಾಗಿದೆ. ನೀರಿನ ಸಂಗ್ರಹಣೆ ಹೆಚ್ಚಬೇಕು. ಅಂತರ್ಜಲ ಕುಸಿಯುತ್ತಿದ್ದು, ಗಿಡ–ಮರಗಳನ್ನು ಬೆಳೆಸಬೇಕು. ಅವುಗಳು ಇಂಗಾಲದ ಡೈಆಕ್ಸೈಡ್‌ನ್ನು ಹೀರಿ ಆಮ್ಲಜನಕ ಬಿಡುತ್ತವೆ. ಶುದ್ಧ ಆಮ್ಲಜನಕ ಬದುಕಿನ ಭರವಸೆ ಎಂದು ಶ್ರೀಗಳು ನುಡಿದರು.


ಮೃತ್ಯುಂಜಯ ಹಿರೇಮಠ, ಗುರುನಾಥ್ ಸುತಾರ ಮತ್ತು ಅಶೋಕ್ ಸುತಾರ ಸಂಗೀತ ಸೇವೆ ನೇರವೇರಿಸಿದರು. ಧಾರ್ಮಿಕ ಗ್ರಂಥ ಪಠಣವನ್ನು ಅನುಪಮಾ ಎ.ಬೆಟಗೇರಿ ಹಾಗೂ ವಚನ ಚಿಂತನವನ್ನು ಧನುಷಾ ಎಂ.ವೀರಶೆಟ್ಟರ ನಡೆಸಿದರು. ದಾಸೋಹ ಸೇವೆಯನ್ನು ಬಸಯ್ಯ ಚನ್ನಬಸಯ್ಯ ಮಠದ ವಹಿಸಿದ್ದರು.

ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಉಪಾಧ್ಯಕ್ಷ ಡಾ. ಉಮೇಶ ಪುರದ, ವಿದ್ಯಾ ಗಂಜಿಹಾಳ, ಕಾರ್ಯದರ್ಶಿ ವೀರಣ್ಣ ಗೋಟಡಕಿ, ಸಹಕಾರ್ಯದರ್ಶಿ ಸೋಮನಾಥ ಪುರಾಣಿಕ, ನಾಗರಾಜ್ ಹಿರೇಮಠ, ಸಂಘಟನಾ ಕಾರ್ಯದರ್ಶಿ ಮಹೇಶ್ ಗಾಣಿಗೇರ, ಕೋಶಾಧ್ಯಕ್ಷ ಬಸವರಾಜ ಕಾಡಪ್ಪನವರ, ಶಿವಾನುಭವ ಸಮಿತಿಯ ಸಹ ಚೇರಮನ್ ಶಿವಾನಂದ ಹೊಂಬಳ, ಮಠದ ಭಕ್ತರು ಉಪಸ್ಥಿತರಿದ್ದರು. ಶಿವಾನುಭವ ಸಮಿತಿಯ ಚೇರಮನ್ ಐ.ಬಿ. ಬೆನಕೊಪ್ಪ ಸ್ವಾಗತಿಸಿದರು. ವಿದ್ಯಾ ಪ್ರಭು ಗಂಜಿಹಾಳ ಕಾರ್ಯಕ್ರಮ ನಿರೂಪಿಸಿದರು.

> ಉಪನ್ಯಾಸಕರಾಗಿ ಆಗಮಿಸಿದ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಸುರೇಶ ವಿ.ಕುಂಬಾರ ಮಾತನಾಡಿ, ನೀರು ಜೀವನದ ಮೇಲೆ ಅಗಾಧವಾದ ಪರಿಣಾಮವನ್ನು ಬೀರುತ್ತದೆ. ನೀರಿಲ್ಲದೆ ಬದುಕಿಲ್ಲ. ಬದುಕೇ ನೀರು, ನೀರೇ ಬದುಕು. ನೀರಿನ ಸಂಗ್ರಹಣೆ ಮಾಡಬೇಕು. ಕೆರೆ, ಹಳ್ಳ, ಬಾವಿಗಳು ತುಂಬಿ ಹರಿಯಬೇಕು. ನೀರಿದ್ದರೆ ಎಲ್ಲೆಲ್ಲೂ ಹಸಿರು. ಆದ್ದರಿಂದ ನೀರನ್ನು ಸಂಗ್ರಹಣೆ ಮಾಡಬೇಕು. ಮಳೆ ನೀರು ಕೊಯ್ಲಿಗೆ ಎಲ್ಲರೂ ಮುಂದಾಗಬೇಕು. ಶುದ್ಧ ನೀರು ಎಲ್ಲರಿಗೂ ಸಿಗುವಂತಾಗಬೇಕು. ಆರೋಗ್ಯವಾಗಿರಲು ನೀರು ಅತೀ ಅವಶ್ಯಕ ಎಂದು ತಿಳಿಸಿಕೊಟ್ಟರು.

### ಬೀಚಿ ಬಳಗ ಹಮ್ಮಿಕೊಂಡಿದ್ದ 'ಮಹಿಳಾ ದಿನಾಚರಣೆ' ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಶ್ರೀ

# ಮಹಿಳೆ ಕಣ್ಣೀರು ಹಾಕದಂತೆ ನೋಡಿಕೊಳ್ಳಿ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಪ್ರತಿ ಮನೆಗೂ ಮಹಿಳೆ ಭೂಷಣ. ಮಹಿಳೆ ಇಲ್ಲದ ಮನೆಯನ್ನು ಊಹಿಸಿಕೊಳ್ಳುವುದು ಕಷ್ಟ. ತನ್ನ ಮನೆಯನ್ನು ಬಿಟ್ಟು ಇನ್ನೊಂದು ಮನೆಯನ್ನು ಬೆಳಗಲು ಬಂದ ಮಹಿಳೆಯ ಕಣ್ಣಲ್ಲಿ ನೀರು ಬಾರದಂತೆ ನೋಡಿಕೊಳ್ಳುವುದು ಎಲ್ಲರ ಜವಾಬ್ದಾರಿಯಾಗಿದೆ ಎಂದು ಹಿರೇಮಠದ ಶ್ರೀ ಮಲ್ಲಿಕಾರ್ಜುನ ಸ್ವಾಮೀಜಿ ಹೇಳಿದರು. ಪಟ್ಟಣದ ಹಿರೇಮಠದ ಸಭಾಭವನದಲ್ಲಿ ಗುರುವಾರ ಸಂಜೆ ಬೀಚಿ ಬಳಗದಿಂದ ಆಚರಿಸಲಾದ ಅಂತಾರಾಷ್ಟ್ರೀಯ ಮಹಿಳಾ ದಿನಾಚರಣೆಯನ್ನು ಉದ್ಘಾಟಿಸಿ ಅವರು ಆಶೀರ್ವಚನ ನೀಡಿದರು. ಭಾರತದಲ್ಲಿ ಮಹಿಳೆಗೆ ವಿಶೇಷ ಗೌರವವನ್ನು ನೀಡಲಾಗುತ್ತಿದೆ. ಮಹಿಳೆಗೆ ದೇವತೆಯ ಸ್ಥಾನ ನೀಡಿದ ದೇಶ ಭಾರತ. ಆದರೂ ಮಹಿಳೆಯ ಮೇಲಿನ ದೌರ್ಜನ್ಯಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿದೆ. ಇದು ಅಕ್ಷಮ್ಯವಾಗಿದ್ದು, ಇಂತಹ ದಿನಾಚರಣೆಗಳು ಇದಕ್ಕೆ ಪರಿಹಾರವನ್ನು ನೀಡುವಂತಾಗಲಿ ಎಂದರು. ರೋಣ ಸ್ಪಂದನಾ ಮಹಿಳಾ ಮಂಡಳದ ಅಧ್ಯಕ್ಷೆ ಶಶಿಕಲಾ ಪಾಟೀಲ ಮಾತನಾಡಿ, ಮಹಿಳೆಯರು ಪಾಶ್ಚಾತ್ಯ ಸಂಸ್ಕೃತಿಗೆ ಮಾರು ಹೋಗುವದನ್ನು ಬಿಡಬೇಕು. ನಮ್ಮ ಭಾರತೀಯ ಸಂಸ್ಕೃತಿ ಜಗತ್ತಿನಲ್ಲಿಯೇ ಎಲ್ಲರಿಂದಲೂ ಗೌರವಿಸಲ್ಪಡುತ್ತಿದೆ. ಇದನ್ನು ಬೆಳೆಸಿಕೊಂಡು ನಮ್ಮತನವನ್ನು ಉಳಿಸಿಕೊಂಡು ಹೋಗುವ ಸಂಕಲ್ಪವನ್ನು ಮಾಡಬೇಕಿದೆ. ಮಕ್ಕಳನ್ನು ಸಾಂಸ್ಕೃತಿಕವಾಗಿ ಬೆಳೆಸುವುದರ ಜೊತೆಗೆ ಅವರಲ್ಲಿ ಮಾನವೀಯ ಮೌಲ್ಯಗಳನ್ನು ಬೆಳೆಸಬೇಕಿದೆ. ಈ ದಿನಾಚರಣೆ ಅಂತಹ ಕಾರ್ಯಕ್ಕೆ ವೇದಿಕೆಯಾಗಲಿ ಎಂದರು. ನರೇಗಲ್ಲ ಶ್ರೀ ಅನ್ನಪೂರ್ಣೇಶ್ವರಿ ಮಹಿಳಾ ಮಂಡಳದ ಅಧ್ಯಕ್ಷೆ ಕಸ್ತೂರಿ ಧನ್ನೂರ ಮಾತನಾಡಿ, ಮಹಿಳೆ ತನ್ನ ಸ್ವಾತಂತ್ರ್ಯವನ್ನು ಎಂದಿಗೂ ಸ್ವೇಚ್ಛಾಚಾರ ಮಾಡಿಕೊಳ್ಳಬಾರದು. ಮಹಿಳಾ ಮಂಡಳಗಳಲ್ಲಿ ನಾವು ಮಹಿಳೆಯರಿಗೆ ಭಾರತೀಯ ಸಂಸ್ಕೃತಿಯನ್ನು ಸಾರಿ ಹೇಳುವ ಕಾಲ ಬಂದಿದೆ. ನಮ್ಮತನದೊಂದಿಗೆ ಸಾಧನೆಯತ್ತ ದಾಪುಗಾಲು ಹಾಕಬೇಕೆಂದರು.

> ಪಿಎಸ್‌ಐ ಐಶ್ವರ್ಯ ನಾಗರಾಳ ಮಾತನಾಡಿ, ಸಮಾಜ ಮಹಿಳೆಯರನ್ನು ಗೌರವದಿಂದ ಕಾಣಬೇಕು. ಇಂದಿನ ದಿನಗಳಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯಗಳು ಹೆಚ್ಚಾಗುತ್ತಿರುವುದು ವಿಷಾದನೀಯ. ಹೆಣ್ಣುಮಕ್ಕಳು ತಮ್ಮ ತಾಯಂದಿರಿಂದ ನೈತಿಕ ಶಿಕ್ಷಣವನ್ನು ಪಡೆದುಕೊಳ್ಳಬೇಕು. ಜೀವನದಲ್ಲಿ ಒಮ್ಮೆ ದಾರಿ ತಪ್ಪಿದರೆ ಮುಂದೆ ಅದನ್ನೆಂದಿಗೂ ಸರಿಪಡಿಸಲು ಸಾಧ್ಯವಿಲ್ಲ. ಇದನ್ನು ಮಹಿಳೆ ಮನಗಾಣಬೇಕೆಂದರು.

ಪ್ರಾಚಾರ್ಯೆ ಅನಸೂಯಾ ಪಾಟೀಲ ಮಾತನಾಡಿದರು. ಅಧ್ಯಕ್ಷತೆ ವಹಿಸಿದ್ದ ಬೀಚಿ ಬಳಗದ ಅಧ್ಯಕ್ಷ ಕೆ.ಎಸ್. ಕಳಕಣ್ಣವರ ಮಾತನಾಡಿ, ಮಹಿಳೆ ಸಮಾಜದ ಕಣ್ಣಾಗಿದ್ದಾಳೆ. ಅವಳನ್ನು ಗೌರವಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಅದಕ್ಕೆಂದೇ ಈ ಕಾರ್ಯಕ್ರಮ ಹಮ್ಮಿಕೊಂಡಿದ್ದೇವೆ ಎಂದರು. ಗಾಯಕಿ ಗೀತಾ ಭೋಪಳಾಪೂರ ಅವರ ಸಂಗೀತ ಎಲ್ಲರ ಮನ ಸೂರೆಗೊಂಡಿತು. ನಿವೃತ್ತ ಶಿಕ್ಷಕಿ ರತ್ನಮ್ಮ ದಢೇಸೂರಮಠ ವಿಶೇಷ ಉಪನ್ಯಾಸ ನೀಡಿದರು. ಡಿ.ಎ. ಅರವಟಗಿಮಠ ಪ್ರಾಸ್ತಾವಿಕ ನುಡಿಗಳನ್ನಾಡಿದರು. ಅಕ್ಕಮ್ಮ ಬೆಟಗೇರಿ ಸ್ವಾಗತಿಸಿದರು. ಜಯಶ್ರೀ ಗಂಗರಗೊಂಡ ನಿರೂಪಿಸಿದರು. ಭಾರತಿ ಶಿರ್ಸಿ ವಂದಿಸಿದರು.

# ಅನಿರ್ದಿಷ್ಟಾವಧಿ ಉಪವಾಸ ಅಂತ್ಯಗೊಳಿಸಿದ ರೈತ ನಾಯಕ ದಲ್ಲೆವಾಲ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

ಕನಿಷ್ಠ ಬೆಂಬಲ ಬೆಲೆಗೆ (ಎಂಎಸ್‌ಪಿ) ಕಾನೂನು ಖಾತರಿ ಸೇರಿದಂತೆ ವಿವಿಧ ಬೇಡಿಕೆಗಳನ್ನು ಮುಂದಿಟ್ಟುಕೊಂಡು ಅನಿರ್ದಿಷ್ಟಾವಧಿ ಉಪವಾಸ ಸತ್ಯಾಗ್ರಹ ಕೈಗೊಂಡಿದ್ದ ರೈತ ನಾಯಕ ಜಗಜಿತ್ ಸಿಂಗ್ ದಲ್ಲೆವಾಲ್ ಅವರು ಶುಕ್ರವಾರ (ಮಾ.28) ಬೆಳಿಗ್ಗೆ ನೀರು ಸ್ವೀಕರಿಸಿ ಉಪವಾಸ ಅಂತ್ಯಗೊಳಿಸಿದ್ದಾರೆ ಎಂದು ಪಂಜಾಬ್ ಸರ್ಕಾರ ಸುಪ್ರೀಂ ಕೋರ್ಟ್‌ಗೆ ತಿಳಿಸಿದೆ.

ಖಾನೌರಿ ಮತ್ತು ಶಂಭು ಗಡಿಗಳಲ್ಲಿ ಪ್ರತಿಭಟನಾ ನಿರತ ರೈತರನ್ನು ಚದುರಿಸಲಾಗಿದೆ. ಎಲ್ಲಾ ನಿರ್ಬಂಧಿತ ರಸ್ತೆಗಳು ಮತ್ತು ಹೆದ್ದಾರಿಗಳನ್ನು ತೆರೆಯಲಾಗಿದೆ ಎಂದು ಪಂಜಾಬ್ ಸರ್ಕಾರದ ಪರ ಅಡ್ವೊಕೇಟ್ ಜನರಲ್ ಗುರ್ಮಿಂದರ್ ಸಿಂಗ್ ಅವರು ನ್ಯಾಯಮೂರ್ತಿಗಳಾದ ಸೂರ್ಯಕಾಂತ್ ಮತ್ತು ಎನ್ ಕೋಟೀಶ್ವರ್ ಸಿಂಗ್ ಅವರ ಪೀಠಕ್ಕೆ ಮಾಹಿತಿ ನೀಡಿದ್ದಾರೆ.

"ರೈತರ ಸಮಸ್ಯೆಗಳನ್ನು ಪರಿಹರಿಸುವುದು ಕೆಲವು ಜನರಿಗೆ ಇಷ್ಟವಿಲ್ಲ ಎಂಬುದು ನಮಗೆ ಗೊತ್ತಿದೆ. ನಾವು ದಂತ ಗೋಪುರದಲ್ಲಿ ಕುಳಿತಿಲ್ಲ. ನಮಗೆ ಎಲ್ಲವೂ ತಿಳಿದಿದೆ" ಎಂದು ಹೇಳಿದ ಪೀಠ, ಪಂಜಾಬ್ ಮತ್ತು ಹರಿಯಾಣ ಸರ್ಕಾರಕ್ಕೆ ಪ್ರಸ್ತುತ ಪರಿಸ್ಥಿತಿಯ ಬಗ್ಗೆ ಸ್ಥಿತಿಗತಿ ವರದಿ ಸಲ್ಲಿಸುವಂತೆ ಸೂಚಿಸಿದೆ.

ರೈತರ ಸಮಸ್ಯೆಗಳನ್ನು ಆಲಿಸಲು ಮತ್ತು ಪೂರಕ ಸ್ಥಿತಿಗತಿ ವರದಿ ಸಲ್ಲಿಸಲು ಮಾಜಿ ಹೈಕೋರ್ಟ್ ನ್ಯಾಯಾಧೀಶರ ನೇತೃತ್ವದ ಉನ್ನತಾಧಿಕಾರ ಸಮಿತಿಯನ್ನು ರಚಿಸುವಂತೆಯೂ ಸುಪ್ರೀಂ ಕೋರ್ಟ್ ಆದೇಶಿಸಿದೆ.

ದಲ್ಲೆವಾಲ್ ಅವರಿಗೆ ವೈದ್ಯಕೀಯ ನೆರವು ನೀಡುವ ಸುಪ್ರೀಂ ಕೋರ್ಟ್‌ನ ಆದೇಶವನ್ನು ಪಾಲಿಸದಿದ್ದಕ್ಕಾಗಿ ಪಂಜಾಬ್ ಸರ್ಕಾರದ ಮುಖ್ಯ ಕಾರ್ಯದರ್ಶಿ ಮತ್ತು ಪೊಲೀಸ್ ಮಹಾನಿರ್ದೇಶಕರ ವಿರುದ್ಧ ದಾಖಲಾಗಿದ್ದ ನ್ಯಾಯಾಂಗ ನಿಂದನೆ ಪ್ರಕರಣಗಳನ್ನು ಕೋರ್ಟ್ ಕೈಬಿಟ್ಟಿದೆ.

ಮಾರ್ಚ್ 19ರಂದು, ಕೇಂದ್ರ ಸರ್ಕಾರದ ನಿಯೋಗದೊಂದಿಗೆ ಸಭೆ ನಡೆಸಿ ಹಿಂತಿರುಗುತ್ತಿದ್ದಾಗ ಸರ್ವಾನ್ ಸಿಂಗ್ ಪಂಧೇರ್ ಮತ್ತು ದಲ್ಲೆವಾಲ್ ಸೇರಿದಂತೆ ಹಲವು ರೈತ ನಾಯಕರನ್ನು ಪಂಜಾಬ್‌ನ ಮೊಹಾಲಿಯಲ್ಲಿ ಪೊಲೀಸರು ಬಂಧಿಸಿದ್ದಾರೆ. ನಂತರ, ಪೊಲೀಸರು ಶಂಭು ಮತ್ತು ಖಾನೌರಿ ಗಡಿಗಳಿಂದ ಪ್ರತಿಭಟನಾ ಸ್ಥಳವನ್ನು ತೆರವುಗೊಳಿಸಿ, ರೈತರನ್ನು ಅಲ್ಲಿಂದ ಕಳಿಸಿದ್ದಾರೆ. ಕಳೆದ ಒಂದು ವರ್ಷಕ್ಕೂ ಹೆಚ್ಚು ಸಮಯದಿಂದ ಶಂಭು, ಖಾನೌರಿ ಗಡಿಗಳಲ್ಲಿ ರೈತರು ಪ್ರತಿಭಟಿಸುತ್ತಿದ್ದರು.

### ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನಿಂದ ವಿಶ್ವ ರಂಗಭೂಮಿ ದಿನಾಚರಣೆ

# ಬದುಕಿನ ಪಾಠ ಕಲಿಸುವ ಶಾಲೆ 'ರಂಗಭೂಮಿ'



■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕೇವಲ ಮನರಂಜನೆಗಷ್ಟೇ ಅಲ್ಲದೇ ಬದುಕಿನ ಮೌಲ್ಯವನ್ನು ತಿಳಿಸಿಕೊಡುವುದು ನಾಟಕ ಕಲೆ. ಸಮಾಜದ ಪ್ರತಿಬಿಂಬವಾದ ನಾಟಕ ಕಲೆ ಸಮಾಜವನ್ನು ತಿದ್ದುವ ಮತ್ತು ಬದುಕಿನ ನೀತಿಪಾಠ ಕಲಿಸುವ ಶಾಲೆ 'ರಂಗಭೂಮಿ'ಯಾಗಿದೆ ಎಂದು ಜಿ.ಪಂ ಮಾಜಿ ಅಧ್ಯಕ್ಷ ಎಸ್.ಪಿ. ಬಳಿಗಾರ ಹೇಳಿದರು.

ಅವರು ಲಕ್ಷ್ಮೇಶ್ವರದಲ್ಲಿ ನಾಟಕ ಪ್ರದರ್ಶನ ನಡೆಸುತ್ತಿರುವ ರಾಣೆಬೆನ್ನೂರಿನ ಶ್ರೀ ಮಂಜುನಾಥ ನಾಟ್ಯ ಸಂಘದಲ್ಲಿ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನಿಂದ ವಿಶ್ವ ರಂಗಭೂಮಿ ದಿನಾಚರಣೆ ಆಚರಿಸಿ ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಟಿವಿ, ಮೊಬೈಲ್ ಹಾವಳಿಯಿಂದಾಗಿ ರಂಗಭೂಮಿ ಹಿನ್ನಡೆ ಅನುಭವಿಸುತ್ತಿದೆ. ಈಗ ರಂಗಭೂಮಿ ಕಲಾವಿದರ ಬದುಕು ಕೂಡ ಸಂಕಷ್ಟದಲ್ಲಿದೆ. ಕಲಾವಿದರೇ ಈ ದೇಶದ ನಿಜವಾದ ದೊಡ್ಡ ಆಸ್ತಿ. ಕಲೆಗೆ, ಕಲಾವಿದರಿಗೆ ಪ್ರೋತ್ಸಾಹ, ಸಹಕಾರ ನೀಡಿದ್ದೇ ಆದಲ್ಲಿ ಕಲಾವಿದ ಮತ್ತು ಕಲೆ ಉಳಿಯಲು ಸಾಧ್ಯ. ಈ ನಿಟ್ಟಿನಲ್ಲಿ ಕಲೆ ಮತ್ತು ಕಲಾವಿದರನ್ನು ಉಳಿಸಿ, ಬೆಳೆಸುವ ಜವಾಬ್ದಾರಿ ಸರ್ಕಾರ, ಸಂಘ–ಸಂಸ್ಥೆಗಳು, ರಂಗಾಸಕ್ತರು ಹಾಗೂ ಸಾರ್ವಜನಿಕರದ್ದಾಗಿದೆ ಎಂದರು.

ಸಾಹಿತಿ ಬಸವರಾಜ ಬಾಳೇಶ್ವರಮಠ, ಸಿ.ಜಿ. ಹಿರೇಮಠ ಮಾತನಾಡಿ, ಲಕ್ಷ್ಮೇಶ್ವರ ಕನ್ನಡ ಸಾಹಿತ್ಯ, ಸಂಗೀತ, ನಾಟಕ ಕ್ಷೇತ್ರಕ್ಕೆ ಅಮೂಲ್ಯವಾದ ಕೊಡುಗೆಯನ್ನು ನೀಡಿದೆ. ಲಕ್ಷೇಶ್ವರದ ಬಚ್ಚಾಸಾನಿ ಸಹೋದರಿಯರು ಪರಿವಾರ ಸಮೇತ ಹುಟ್ಟುಹಾಕಿದ 'ಸ್ತ್ರೀ ಸಂಗೀತ ನಾಟಕ ಮಂಡಳಿ' ರಾಜ್ಯದ ಪ್ರಥಮ ನಾಟಕ ಕಂಪನಿಯಾಗಿದೆ. ಬದುಕಿನ ಹಂತ, ಮೌಲ್ಯಗಳನ್ನು ಅಭಿನಯದ ಮೂಲಕ ಜೀವಂತಿಕೆಯ ರೂಪ ನೀಡುವ ಕಲೆ ಮತ್ತು ಕಲಾವಿದರನ್ನು ಉಳಿಸಿ–ಬೆಳೆಸುವುದು ಎಲ್ಲ ಜವಾಬ್ದಾರಿಯಾಗಿದೆ ಎಂದರು.

ನಾಟ್ಯ ಸಂಘದ ಹಿರಿಯ ಕಲಾವಿದ, ಮಾಲಕ ಮಲ್ಲಿಕಾರ್ಜುನ ಚಿಕ್ಕಮಠ ಸೇರಿ ಕಲಾವಿರರನ್ನು ಸನ್ಮಾನಿಸಿ ಗೌರವಿಸಲಾಯಿತು. ಈ ವೇಳೆ ಪುರಸಭೆ ಸದಸ್ಯ ಮಹೇಶ ಹೊಗೆಸೊಪ್ಪಿನ, ಸಾಹಿತಿ ರಮೇಶ ನವಲೆ, ಕಸಾಪ ಅಧ್ಯಕ್ಷ ಈಶ್ವರ ಮೆಡ್ಲೇರಿ, ಮಂಜುನಾಥ ಚಾಕಲಬ್ಬಿ, ನಾಗರಾಜ ಶಿಗ್ಲಿ, ಈರಣ್ಣ ಗಾಣಗೇರ, ನಾಗರಾಜ ಮಜ್ಜಿಗುಡ್ಡ, ಅರವಿಂದ ದೇಶಪಾಂಡೆ, ವಿಜಯ. ಮೆಕ್ಕಿ, ಕಾನಿಪ ಸಂಘದ ತಾಲೂಕಾಧ್ಯಕ್ಷ ಮಲ್ಲು ಕಳಸಾಪುರ, ನಾಗರಾಜ ಹಣಗಿ, ಸಾಹಿತಿ ಸುರೇಶ ಹಲ್ಲಲ್ಲಿ, ದಿಂಗಂಬರ ಪೂಜಾರ ಸೇರಿ ಹಲವರಿದ್ದರು.


## ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ, ಗದಗ

ಪಿನ್ ಕೋಡ್ ನಂ. 582101. ದೂರವಾಣಿ: 08372–278003. ಇ ಮೇಲ್: uda-gadag@hotmail.com

ಸಂ: ನಪ್ರಾಗಬೆ/ಭೂಉನಿ/2024–25/ 1859 ದಿನಾಂಕ: 27.03.2025

**ಪ್ರಕಟಣೆ**

ಸಾರ್ವಜನಿಕರಿಗೆ ಈ ಮೂಲಕ ತಿಳಿಸುವದೇನೆಂದರೆ, ಅರ್ಜಿದಾರರಾದ **ಶ್ರೀಮತಿ ಹನಮ್ಮವ್ವ ಕೋಂ ಲಕ್ಷ್ಮಣ ಶಿಗ್ಗಾಂವಿ** ಸಾ: ಗದಗ ಈ ಕೆಳಕಂಡ ಜಮೀನನ್ನು ಭೂ ಉಪಯೋಗ ನಿಗಧಿಪಡಿಸಲು ಅರ್ಜಿ ಸಲ್ಲಿಸಿರುತ್ತಾರೆ. ಈ ಭೂ ಉಪಯೋಗ ನಿಗಧಿಪಡಿಸುವದರಿಂದ ಸ್ಥಳದಲ್ಲಿ ವಾಣಿಜ್ಯ ನಿವೇಶನಗಳನ್ನು ಮಾಡಲು ಉದ್ದೇಶಿಸಿರುತ್ತಾರೆ. ಇದರಿಂದ ಅರ್ಜಿದಾರರಿಗೆ ವಾಣಿಜ್ಯ ಚಟುವಟಿಕೆಗಳನ್ನು ನಡೆಸಲು ಹಾಗೂ ಹಲವರಿಗೆ ಉದ್ಯೋಗ ದೊರಕುತ್ತವೆ. ಎಂದು ತಮ್ಮ ಅರ್ಜಿಯಲ್ಲಿ ತಿಳಿಸಿರುತ್ತಾರೆ. ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 69(3) ರಂತೆ ಭೂ ಉಪಯೋಗ ಬದಲಾವಣೆ ಮಾಡುವ ಬಗ್ಗೆ ಸಾರ್ವಜನಿಕರಿಂದ ಸಲಹೆ/ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಈ ಪ್ರಕಟಣೆ ಆದ ದಿನಾಂಕದಿಂದ 15 (ಹದಿನೈದು) ದಿನಗಳೊಳಗಾಗಿ ಆಯುಕ್ತರು, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರ. ಪಿ.ಬಿ. ರೋಡ ಗದಗ–582101. ಇವರಿಗೆ ಲಿಖಿತವಾಗಿ ಸಲ್ಲಿಸಲು ಕೋರಲಾಗಿದೆ. ಅವಧಿ ಮುಗಿದ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

| ಅ. ನಂ | ಗ್ರಾಮ | ರಿ.ಸ.ನಂ | ಕ್ಷೇತ್ರ | ಮಹಾ ಯೋಜನೆ ಪ್ರಕಾರ ನಿಗಧಿಪಡಿಸಿದ ಭೂ ಉಪಯೋಗ | ಅರ್ಜಿದಾರರು ಬಯಸಿರುವ ಭೂ ಉಪಯೋಗ ಬದಲಾವಣೆ |
| --- | --- | --- | --- | --- | --- |
| 1 | ಗದಗ | 146/*/1ಇ | 01ಎಕರೆ – 00 ಗುಂಟೆ | ಉದ್ಯಾನವನ / ಬಯಲುಜಾಗೆ | ವಾಣಿಜ್ಯ |

ಸಹಿ/– ಆಯುಕ್ತರು
ನಗರಾಭಿವೃದ್ಧಿ ಪ್ರಾಧಿಕಾರ ಗದಗ–ಬೆಟಗೇರಿ

ವಾ.ಸಾ.ಇ/ಗದಗ/729/ದೇಶಪಾಂಡೆಪಬ್ಲಿಸಿಟಿ/2024–25


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka